ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 02 | PAGE- ಪುಟ 8 | ಭಾನುವಾರ 02.02.2025 | RS.ಬೆಲೆ 2/-

# ಮಧ್ಯಮ ವರ್ಗಕ್ಕೆ ಬಂಪರ್

## ಆದಾಯ ತೆರಿಗೆ ವಿನಾಯಿತಿ ಮಿತಿ 12 ಲಕ್ಷಕ್ಕೇರಿಕೆ

ನವದೆಹಲಿ:ಫೆ.1: ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಾವು ಮಂಡಿಸುತ್ತಿರುವ ಕೇಂದ್ರ ಬಜೆಟ್ ನಲ್ಲಿ ಮಧ್ಯಮ ವರ್ಗದ ಬಹು ದಿನಗಳ ಬೇಡಿಕೆ ಕೊನೆಗೂ ಈಡೇರಿಸಿದ್ದು ಆದಾಯ ತೆರಿಗೆ ವಿನಾಯಿತಿ ಮಿತಿಯನ್ನು 12 ಲಕ್ಷಕ್ಕೇರಿಕೆ ಮಾಡಿದ್ದಾರೆ.

ಸಂಸತ್ ಭವನದಲ್ಲಿ ಬಜೆಟ್ ಅಧಿವೇಶನದಲ್ಲಿ ಆದಾಯ ತೆರಿಗೆ ವಿನಾಯಿತಿ ಮಿತಿಯನ್ನು ಏರಿಕೆ ಮಾಡಲಾಗಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅಂದರೆ 12 ಲಕ್ಷ ರೂಪಾಯಿಗಳವರೆಗಿನ ಆದಾಯದ ಮೇಲೆ ಯಾವುದೇ ಆದಾಯ ತೆರಿಗೆ ಇರುವುದಿಲ್ಲ ಎಂದು ಹೇಳಿದ್ದಾರೆ.

ಹೊಸ ತೆರಿಗೆ ಪದ್ಧತಿ ಅಡಿಯಲ್ಲಿ 12 ಲಕ್ಷ ರೂಪಾಯಿವರೆಗೂ ಆದಾಯ ತೆರಿಗೆ ಇಲ್ಲ. ಆದರೆ 4 ಲಕ್ಷದಿಂದ 8 ಲಕ್ಷದವರೆಗೆ ಶೇ.5ರಷ್ಟು ತೆರಿಗೆ ವಿಧಿಸಲಾಗಿದ್ದು, 8 ಲಕ್ಷದಿಂದ 11 ಲಕ್ಷದವರೆಗೆ ಶೇ.10ರಷ್ಟು ತೆರಿಗೆ ವಿಧಿಸಲಾಗಿದೆ. 12 ಲಕ್ಷದಿಂದ 15 ಲಕ್ಷದವರೆಗೆ ಶೇ.15ರಷ್ಟು ತೆರಿಗೆ ಮತ್ತು 15 ಲಕ್ಷದಿಂದ 20 ಲಕ್ಷದವರೆಗೆ ಶೇ.20ರಷ್ಟು ತೆರಿಗೆ 20 ಲಕ್ಷದಿಂದ 24 ಲಕ್ಷದರೆಗೆ ಶೇ.25ರಷ್ಟು ತೆರಿಗೆ 24 ಲಕ್ಷ ಮೇಲ್ಪಟ್ಟ ಆದಾಯಕ್ಕೆ ಶೇ.30ರಷ್ಟು ತೆರಿಗೆ ವಿಧಿಸಲಾಗಿದೆ ಎಂದು ವಿತ್ತ ಸಚಿವರು ಹೇಳಿದ್ದಾರೆ.

ಮಧ್ಯಮ ವರ್ಗದ ಮೇಲೆ ಕೇಂದ್ರೀಕರಿಸಲು ವೈಯಕ್ತಿಕ ಆದಾಯ ತೆರಿಗೆ ಸುಧಾರಣೆಗಳನ್ನು ತರಲಾಗಿದೆ. ಹೊಸ ತೆರಿಗೆ ಪದ್ಧತಿ ಅನ್ವಯ 4 ಲಕ್ಷ ರೂ ವರೆಗಿನ ಆದಾಯಕ್ಕೆ ಯಾವುದೇ ತೆರಿಗೆ ಇಲ್ಲ. ಹಿರಿಯ



ನಾಗರಿಕರಿಗೆ ತೆರಿಗೆ ಕಡಿತದ ಮಿತಿಯನ್ನು 1 ಲಕ್ಷ ರೂ.ಗೆ ದ್ವಿಗುಣಗೊಳಿಸಲಾಗಿದೆ. ಅಂತೆಯೇ ಬಾಡಿಗೆ ಮೇಲಿನ ಟಿಡಿಎಸ್‌ನ ವಾರ್ಷಿಕ ಮಿತಿಯನ್ನು 2.4 ಲಕ್ಷ ರೂ.ಗಳಿಂದ 6 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು

## ಜನರ ಹಣವನ್ನು ಜನರಿಗೆ ತಲುಪಿಸುವ ಬಜೆಟ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಫೆ.1: ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಕೇಂದ್ರ ಬಜೆಟ್ ಅನ್ನು ಶನಿವಾರ ಪ್ರಧಾನಿ ನರೇಂದ್ರ ಮೋದಿ ಅವರು "ಜನರ ಬಜೆಟ್" ಎಂದು ಶ್ಲಾಘಿಸಿದ್ದಾರೆ. ಇದು ಜನರ ಕೈಯಲ್ಲಿ ಹೆಚ್ಚಿನ ಹಣವನ್ನು ನೀಡುತ್ತದೆ ಮತ್ತು ಇದು ಹೂಡಿಕೆಗಳನ್ನು ಹೆಚ್ಚಿಸುತ್ತದೆ ಮತ್ತು ಬೆಳವಣಿಗೆಗೆ ಕಾರಣವಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

"ಸರ್ಕಾರ 'ವಿಕಸಿತ ಭಾರತ' (ಅಭಿವೃದ್ಧಿ ಹೊಂದಿದ ಭಾರತ) ಧ್ಯೇಯವನ್ನು ಮುನ್ನಡೆಸುವ ಯುವಕರಿಗೆ ಅನೇಕ ಕ್ಷೇತ್ರಗಳನ್ನು ತೆರೆದಿದೆ ಎಂದು ಬಜೆಟ್



ಕುರಿತು ದೂರದರ್ಶನದ ಹೇಳಿಕೆಗಳಲ್ಲಿ ಮೋದಿ ಹೇಳಿದರು. "ಈ ಬಜೆಟ್ ನಿಂದ ಸಾಮಾನ್ಯ ಜನರ ಬಲವರ್ಧನೆಯಾಗಲಿದೆ. ಈ ಬಜೆಟ್ ಉಳಿತಾಯ, ಹೂಡಿಕೆ, ಬಳಕೆ ಮತ್ತು ಬೆಳವಣಿಗೆಯನ್ನು ಹೆಚ್ಚಿಸುತ್ತದೆ" ಎಂದು ಪ್ರಧಾನಿ ಹೇಳಿದ್ದಾರೆ. "ಜನರ ಬಜೆಟ್" ನ್ನು ಮಂಡಿಸಿದ್ದಕ್ಕಾಗಿ ಹಣಕಾಸು ಸಚಿವರು ಮತ್ತು ಅವರ ತಂಡವನ್ನು ಅಭಿನಂದಿಸುವುದಾಗಿ ಪ್ರಧಾನಿ ತಿಳಿಸಿದ್ದಾರೆ.

ಬಜೆಟ್ ಸಾಮಾನ್ಯವಾಗಿ ಸರ್ಕಾರದ ಆದಾಯವನ್ನು ಹೆಚ್ಚಿಸುವತ್ತ ಗಮನಹರಿಸುತ್ತದೆ. ಆದರೆ ಸೀತಾರಾಮನ್ ಮಂಡಿಸಿದ ಬಜೆಟ್ ಜನರ ಜೇಬಿನಲ್ಲಿ ಹೆಚ್ಚಿನ ಹಣವನ್ನು ಹಾಕಲು, ಉಳಿತಾಯವನ್ನು ಹೆಚ್ಚಿಸಲು ಮತ್ತು ನಾಗರಿಕರನ್ನು ಅಭಿವೃದ್ಧಿ ಪ್ರಯಾಣದಲ್ಲಿ ಪಾಲುದಾರರನ್ನಾಗಿ ಮಾಡಲು ಪ್ರಯತ್ನಿಸುತ್ತದೆ. "ಬಜೆಟ್ ಉಳಿತಾಯವನ್ನು ಹೆಚ್ಚಿಸಲು ಮತ್ತು ನಾಗರಿಕರನ್ನು ಅಭಿವೃದ್ಧಿಯಲ್ಲಿ ಪಾಲುದಾರರನ್ನಾಗಿ ಮಾಡಲು ಬಲವಾದ ಅಡಿಪಾಯವನ್ನು ಹಾಕುತ್ತದೆ" ಎಂದು ಅವರು

(2ನೇ ಪುಟ ನೋಡಿ)

## ರೈತರ ಬೇಡಿಕೆ ಈಡೇರಿಸದ ಕೇಂದ್ರ ಬಜೆಟ್ ನಿರಾಶಾದಾಯಕ: ಸಚಿವ ಈಶ್ವರ ಖಂಡ್ರೆ

ಬೀದರ. ಫೆ. 01 : ಕೇಂದ್ರ ಬಜೆಟ್ ರೈತರ ಬೇಡಿಕೆ ಈಡೇರಿಸುವಲ್ಲಿ ಸಂಪೂರ್ಣ ವಿಫಲವಾಗಿದ್ದು, ನಿರಾಶಾದಾಯಕವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರು ಸಂಸತ್ತಿನಲ್ಲಿಂದು ಮಂಡಿಸಿದ ಬಜೆಟ್ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ರೈತರು ಬೆಳೆದ ಬೆಳೆಗೆ ನಿಶ್ಚಿತ ಬೆಲೆ ಬರಬೇಕು.

ನಿರ್ಮಲಾ ಸೀತಾರಾಮನ್ ಅವರು ಸಂಸತ್ತಿನಲ್ಲಿಂದು



ಮಂಡಿಸಿದ ಬಜೆಟ್ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ರೈತರು ಬೆಳೆದ ಬೆಳೆಗೆ ನಿಶ್ಚಿತ ಬೆಲೆ ಬರಬೇಕು.

ರೈತರು ಪ್ರಕೃತಿ ವಿಕೋಪದಿಂದ ತತ್ತರಿಸಿದ್ದು, ಸಾಲದ ಹೊರೆತಾಳದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ರೈತರ ಕೃಷಿ ಸಾಲ ಮನ್ನಾ ಬಗ್ಗೆ ಈ ಬಜೆಟ್ ನಲ್ಲಿ ಯಾವುದೇ ಘೋಷಣೆ ಮಾಡಿಲ್ಲ ಎಂದೂ ತಿಳಿಸಿದ್ದಾರೆ.

ಬಜೆಟ್ ನಲ್ಲಿ ಬಿಜೆಪಿ ಮತ್ತು ಎನ್.ಡಿ.ಎ.ಯೇತರ ರಾಜ್ಯಗಳಿಗೆ ಘೋರ ಅನ್ಯಾಯ ಮಾಡಲಾಗಿದೆ. ಒಕ್ಕೂಟ ವ್ಯವಸ್ಥೆಯ ಭಾರತದಲ್ಲಿ ಇಂತಹ ತಾರತಮ್ಯ ಸರ್ವತ ಸಮರ್ಥನೀಯವಲ್ಲ. ಇಂತಹ ಒಂದು ಕೆಟ್ಟ ಸಂಪ್ರದಾಯಕ್ಕೆ ಬಜೆಟ್ ನಾಂದಿ ಹಾಡಿದೆ. ಕರ್ನಾಟಕದ ನಿರೀಕ್ಷೆಗಳೂ ಹುಸಿಯಾಗಿವೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಎನ್.ಡಿ.ಎ. ಆಡಳಿತ 11

## ಅಕ್ರಮ ತಂಬಾಕು ಸಾಗಾಟ : ನಾಲ್ವರ ವಿರುದ್ಧ ಪ್ರಕರಣ ದಾಖಲು




ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 01: ಮಂಠಾಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿ 65ರ ಮೂಲಕ ಹೈದರಾಬಾದ್ ನಿಂದ ಮುಂಬೈಗೆ ಅನಧಿಕೃತವಾಗಿ ಸಾಗಾಟ ಮಾಡುತ್ತಿದ್ದ ಅಕ್ರಮ ತಂಬಾಕನ್ನು ವಶಕ್ಕೆ

(2ನೇ ಪುಟ ನೋಡಿ)

## ಸಿಎಂ ಸಲಹೆಗಾರ ಸ್ಥಾನಕ್ಕೆ ಬಿ.ಆರ್ ಪಾಟೀಲ್ ರಾಜೀನಾಮೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.1: ಮುಖ್ಯಮಂತ್ರಿ ಸಲಹೆಗಾರ ಹುದ್ದೆಗೆ ಶಾಸಕ ಬಿ.ಆರ್ ಪಾಟೀಲ್ ರಾಜೀನಾಮೆ ನೀಡಿದ್ದಾರೆ.

ಅಳಂದ ಕ್ಷೇತ್ರದ ಶಾಸಕ ಬಿ.ಆರ್ ಪಾಟೀಲ್ ಮುಖ್ಯಮಂತ್ರಿಗಳ ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿದ್ದರು, ಇಂದು ಅವರು ತಮ್ಮ ಸಿಎಂ ಸಲಹೆಗಾರ ಹುದ್ದೆಗೆ ರಾಜೀನಾಮೆ ನೀಡಿ ರಾಜೀನಾಮೆ ಪತ್ರವನ್ನು ಮುಖ್ಯಮಂತ್ರಿಗಳಿಗೆ ಕಳಿಸಿದ್ದಾರೆ.

ಸಚಿವಸ್ಥಾನದ ಆಕಾಂಕ್ಷಿಯಾಗಿದ್ದ ಬಿ.ಆರ್ ಪಾಟೀಲ್ ಅವರಿಗೆ ಸಚಿವ ಪಟ್ಟ ಸಿಕ್ಕಿರಲಿಲ್ಲ. ಆಗ ಅವರ



ಮನವೊಲಿಸಿ ಮುಖ್ಯಮಂತ್ರಿಗಳ ಸಲಹೆಗಾರರಾಗಿ ನೇಮಕ ಮಾಡಲಾಗಿತ್ತು. ಈಗ ಬಿ.ಆರ್ ಪಾಟೀಲ್ ಮುಖ್ಯಮಂತ್ರಿಗಳ ಸಲಹೆಗಾರ ಹುದ್ದೆಗೆ ರಾಜೀನಾಮೆ ನಿಡಿರುವುದು

(2ನೇ ಪುಟ ನೋಡಿ)

## ಬಜೆಟ್‌ನಲ್ಲಿ ಕರ್ನಾಟಕಕ್ಕೆ ಖಾಲಿ ಚೊಂಬು: ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಫೆ:01 ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶನಿವಾರ ಮಂಡಿಸಿದ 2025-26ನೇ ಸಾಲಿನ ಬಜೆಟ್ ರಾಜ್ಯ ಮತ್ತು ದೇಶದ ದೃಷ್ಟಿಯಿಂದ ಬಹಳ ನಿರಾಶಾದಾಯಕ ಬಜೆಟ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟೀಕಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ, ನರೇಂದ್ರ ಮೋದಿ ಸರ್ಕಾರ ಕರ್ನಾಟಕಕ್ಕೆ ಚೊಂಬು ಕೊಡುವುದನ್ನು ಮುಂದುವರೆಸಿದೆ. ಕರ್ನಾಟಕದ ದೃಷ್ಟಿಯಿಂದ ಇದೊಂದು ನಿರಾಶದಾಯಕ ಮತ್ತು ದೂರದೃಷ್ಟಿ ಇಲ್ಲದ



ಬಜೆಟ್ ಎಂದು ಹೇಳಿದರು.


ಬಜೆಟ್ ಪೂರ್ವಭಾವಿ ಸಭೆಯಲ್ಲಿ ಕರ್ನಾಟಕ ಅನೇಕ ಬೇಡಿಕೆಗಳನ್ನು ಇಟ್ಟಿತ್ತು. ನಮ್ಮ ಬೇಡಿಕೆಗಳು ಬೇಡಿಕೆಗಳಾಗಿಯೇ ಉಳಿದಿವೆ. ಒಂದೇ ಒಂದು ಬೇಡಿಕೆಯೂ ಈಡೇರಿಲ್ಲ ಎಂದು ಸಿಎಂ ಆಕ್ರೋಶ ವ್ಯಕ್ತಪಡಿಸಿದರು.

ಬಜೆಟ್ ಗಾತ್ರವೂ ಕಡಿಮೆ ಆಗಿದೆ. ಕಳೆದ ಬಾರಿಗಿಂತ 1.04 ಲಕ್ಷ ಕೋಟಿ ಕಡಿಮೆ ಆಗಿದೆ. ತೆರಿಗೆ ಅವರು ಅಂದುಕೊಂಡಷ್ಟು ಸಂಗ್ರಹಿಸಿಲ್ಲ. ಕೇಂದ್ರ ಸರ್ಕಾರ 15,68,936 ಕೋಟಿ ಸಾಲ ಪಡೆಯುತ್ತಿದೆ. 12,70,000 ಕೋಟಿ ರೂ. ಬಡ್ಡಿ ಕಟ್ಟುತ್ತಿದೆ. ಈ ದೇಶದ ಸಾಲದ ಪ್ರಮಾಣ 202 ಲಕ್ಷ ಕೋಟಿಯಿಂದ 205 ಲಕ್ಷ ಕೋಟಿ ರೂ.ಗೆ ಏರುತ್ತಿದೆ. ಈ ಬಜೆಟ್ ನಿರಾಶದಾಯಕ ಬಜೆಟ್ ಎಂದು ವಾಗ್ದಾಳಿ ನಡೆಸಿದರು.

ಕರ್ನಾಟಕ ಹೆಚ್ಚು ತೆರಿಗೆ ಕಟ್ಟುತ್ತಿರುವ ರಾಜ್ಯಗಳಲ್ಲಿ 2ನೇ ಸ್ಥಾನದಲ್ಲಿದೆ. ರಾಜಕೀಯ ಕಾರಣಕ್ಕೆ ಬಿಹಾರ, ಆಂಧ್ರ ಪ್ರದೇಶಕ್ಕೆ ಹೆಚ್ಚು ಅನುದಾನ

(2ನೇ ಪುಟ ನೋಡಿ)

## ಸಮಾಜಕ್ಕೆ ಏನನ್ನು ನೀಡದೇ ಇರುವವರು ಉದ್ದಾರವಾಗುವುದಿಲ್ಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಸಮಾಜಕ್ಕೆ ಏನನ್ನು ನೀಡದೇ ಇರುವರು ಉದ್ದಾರವಾಗುವುದಿಲ್ಲ ಎಂದು ಮಾಣಿಕ್ ಪಬ್ಲಿಕ್ ಸ್ಕೂಲ್ ನಲ್ಲಿ ಸ್ಥಾಪನಾದಿನ ಕಾರ್ಯಕ್ರಮವನ್ನುದ್ದೇಶಿಸಿ ಶನಿವಾರ ಡಾ ಜ್ಞಾನರಾಜ ಪ್ರಭು ಮಾತನಾಡಿ ತಿಳಿಸಿದರು. ಮನುಷ್ಯನ ಜೀವನವು ಸೃಷ್ಟಿಯ ಹಾಗೆಯೇ ತಿರುಗುತ್ತಿರುತ್ತದೆ. ಶಿಕ್ಷಣ ಕ್ಷೇತ್ರ ಉದ್ಯಮವನ್ನಾಗಿ ಮಾಡುವುದರ ಮೂಲಕ ಅಭಿವೃದ್ಧಿ ಹೊಂದುತ್ತೇವೆ ಎಂದು ಕೆಲವರು ತಿಳಿದುಕೊಂಡಿದ್ದಾರೆ. ಅದು ದುಖಕರ ಸಂಗತಿಯಾಗಿದೆ ಎಂದರು.

ಸಮಾಜದಲ್ಲಿ ನಮ್ಮ ಮೇಲೆ ಸಾಕಷ್ಟು ಜನರ ರುಣಭಾರವಿದೆ. ಅದನ್ನು ನಾವು ತೀರಿಸಬೇಕು. ಸಮಾಜಕ್ಕೆ ನಾವು ಏನನ್ನು ನೀಡದೇ ಇದ್ದರೆ ಅವರು ಸಮಾಜದ ದ್ರೋಹಿಗಳಾಗುತ್ತಾರೆ ಎಂದರು. ಶಿಕ್ಷಣ ಕ್ಷೇತ್ರ ಸಂಸ್ಕಾರವನ್ನು ನೀಡಿದಾಗ ಮಾತ್ರ ಶಿಕ್ಷಣ ಸಂಸ್ಥೆಗೆ ಉತ್ತಮ ಹೆಸರು ಬರಲು ಸಾದ್ಯ ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಸಾಕಷ್ಟು ಜನರು ಮಾತನಾಡಿದರು. ಆನಂದರಾಜ ಪ್ರಬುಗಳು ಮಾತನಾಡಿದರು. ಪ್ರಚಾರ್ಯರು. ಸಿಬ್ಬಂದಿ ವರ್ಗದವರಿದ್ದರು. ವಿವಿಧ ಕ್ಷೇತ್ರದಲ್ಲಿ ಸಾದನೆಗೈದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಂತರ ನಾಟಕಗಳು. ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು

## ಮಾರ್ಚ್‌ನಿಂದ ರಾಜ್ಯಾದ್ಯಂತ 'ಗೃಹ ಆರೋಗ್ಯ ಯೋಜನೆ' ಜಾರಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.1: ಕೋಲಾರದಲ್ಲಿ ಯಶಸ್ವಿಯಾಗಿರುವ ಗೃಹ ಆರೋಗ್ಯ ಯೋಜನೆಯನ್ನು ಮಾರ್ಚ್‌ನಿಂದ ರಾಜ್ಯಾದ್ಯಂತ ಜಾರಿಗೊಳಿಸಲಾಗುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಶನಿವಾರ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ರಾಜ್ಯದ ಎಲ್ಲಾ ಆರೋಗ್ಯ ಸೇವೆಗಳನ್ನು ಉತ್ತಮ ಮಟ್ಟಕ್ಕೆ ತೆಗೆದುಕೊಂಡು ಹೋಗುವತ್ತ ಸರ್ಕಾರ ಆದ್ಯತೆ ನೀಡಿದೆ. ಸಾಮಾನ್ಯ, ಬಡ, ದುರ್ಬಲ ವರ್ಗಗಳಿಗೆ, ಗ್ರಾಮೀಣ ಭಾಗಗಳಿಗೆ ಆರೋಗ್ಯ ಸೇವೆಯನ್ನು ಮನೆ



ಬಾಗಿಲಿಗೆ ತಲುಪಿಸಲು ಸರ್ವ ಪ್ರಯತ್ನ ನಡೆಯುತ್ತಿದೆ. ಇದೇ ನಿಟ್ಟಿನಲ್ಲಿ ಗೃಹ ಆರೋಗ್ಯ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಏನಿದು ಗೃಹ ಆರೋಗ್ಯ ಯೋಜನೆ: ಗೃಹ ಆರೋಗ್ಯ' ಎನ್ನುವುದು ಜನ ಸಾಮಾನ್ಯರ ಮನೆ ಬಾಗಿಲಿಗೆ ಆರೋಗ್ಯ ಭಾಗ್ಯವನ್ನು ಕೊಂಡೊಯ್ಯುವ ಪ್ರಮುಖವಾದ ಯೋಜನೆ ಆಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಸಾಂಕ್ರಾಮಿಕ ರೋಗಗಳನ್ನು ಗುರುತಿಸಿ ಮತ್ತು ನಿರಂತರ ಚಿಕಿತ್ಸೆಯಿಂದ ಮರಣದ ಪ್ರಮಾಣವನ್ನು ಕಡಿಮೆ ಮಾಡುವ ಗುರಿ ಹೊಂದಿರುವ ಯೋಜನೆ ಇದಾಗಿದೆ.

ಗೃಹ ಆರೋಗ್ಯ ಯೋಜನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸಿನ ಕೂಸು. ಈ ಯೋಜನೆಯನ್ನು ಮೊದಲಿಗೆ ಕೋಲಾರ ಜಿಲ್ಲೆಯಲ್ಲಿ ಆರಂಭಿಸಲಾಗಿತ್ತು. ಇಲ್ಲಿ ಯೋಜನೆ ಯಶಸ್ವಿಯಾಗಿದ್ದು, ಮಾರ್ಚ್ ತಿಂಗಳಿನಿಂದ ರಾಜ್ಯಾದ್ಯಂತ ಜಾರಿ ಮಾಡಲಾಗುವುದು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಸಿಎಂ ಸಿದ್ದರಾಮಯ್ಯ

ಸಿಕ್ಕಿದೆ. ಮೇಕೆದಾಟು, ಭದ್ರಾ ಮೇಲ್ದಂಡೆ, ಕೃಷ್ಣ ಮೇಲ್ದಂಡೆ ಯೋಜನೆ ಯಾವುದಕ್ಕೂ ಹಣ ಕೊಟ್ಟಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ. ಕೊಡುತ್ತೇವೆ ಎಂದು ಕಳೆದ ಬಾರಿ ಘೋಷಿಸಿದ್ದರು. ಈವರೆಗೆ ಒಂದೂ ನಯಾಪೈಸೆಯೂ ಬಂದಿಲ್ಲ ಎಂದರು.

ರಾಜಸ್ಥಾನ ಬಿಟ್ಟರೆ ಕರ್ನಾಟಕ ಹೆಚ್ಚು ಒಣ ಭೂಮಿ ಇರುವ ರಾಜ್ಯ. ಈ ರಾಜ್ಯಕ್ಕೆ ನೀರಾವರಿ ಯೋಜನೆಗಳಿಗೆ ಒಂದು ರೂಪಾಯಿ ಕೊಟ್ಟಿಲ್ಲ. ರಾಯಚೂರಿಗೆ ಏಮ್ಸ್ ಘೋಷಣೆ ಮಾಡುತ್ತಾರೆ ಎಂದು ನಿರೀಕ್ಷೆ ಇತ್ತು. ಕೇಂದ್ರ ಸಚಿವ ನಡ್ಡಾ ಇದಕ್ಕೆ ಭರವಸೆ ಕೊಟ್ಟಿದ್ದರು. ಅದರ ಪ್ರಸ್ತಾಪವೂ ಇಲ್ಲ ಎಂದು ಸಿಎಂ ಗುಡುಗಿದರು.

## 'ಗೃಹ ಆರೋಗ್ಯ ಯೋಜನೆ' ಜಾರಿ

ಎಂದು ಸಚಿವರು ತಿಳಿಸಿದ್ದಾರೆ.ಈ ಯೋಜನೆಯಡಿ ಮನೆಗಳಿಗೆ ವೈದ್ಯರು, ಆರೋಗ್ಯ ಕಾರ್ಯಕರ್ತರು ಭೇಟಿ ನೀಡಿ 30 ವರ್ಷ ದಾಟಿದವರನ್ನು ತಪಾಸಣೆಗೆ ಒಳಪಡಿಸಿ ಅವರಿಗೆ ಏನಾದರೂ ಸಮಸ್ಯೆ ಇದ್ದರೆ ಉಚಿತವಾಗಿ ಚಿಕಿತ್ಸೆ, ಔಷಧ ನೀಡುತ್ತಾರೆ. ಹಿಂದೆ ಗ್ರಾಮೀಣ ಪ್ರದೇಶದ ಜನರು ಆರೋಗ್ಯ ತಪಾಸಣೆಗಾಗಿ ತಾಲ್ಲೂಕು ಆಸ್ಪತ್ರೆಗೆ ಅಲೆಯಬೇಕಿತ್ತು. ಬಿಪಿ, ಶುಗರ್ ಕಾಯಿಲೆ ಇದ್ದರೂ ತಪಾಸಣೆ ಮಾಡಸದೆ ನಿರ್ಲಕ್ಷ್ಯ ಮಾಡುತ್ತಿದ್ದರು. ಇದನ್ನು ಮನಗಂಡು, ಆರಂಭದಲ್ಲಿಯೇ ಇಂತಹ ಕಾಯಿಲೆಗಳನ್ನು ತಡೆಯುವುದು ಗೃಹ ಆರೋಗ್ಯ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

## ಬಿ.ಆರ್ ಪಾಟೀಲ್ ರಾಜೀನಾಮೆ

ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲೂ ಬಿ.ಆರ್ ಪಾಟೀಲ್ ಅವರು ಕ್ಷೇತ್ರಗಳ ಅಭಿವೃದ್ಧಿಗೆ ಅನುದಾನ ನೀಡದ ಬಗ್ಗೆ ಅಸಮಾಧಾನಗಳನ್ನು ವ್ಯಕ್ತಪಡಿಸುತ್ತಲೇ ಬಂದಿದ್ದರು. ಈಗ ದಿಢೀರ್ ಎಂದು ಸಲಹೆಗಾರ ಹುದ್ದೆಗೆ ರಾಜೀನಾಮೆ ನೀಡಿರುವುದು ಅಚ್ಚರಿಗೆ ಕಾರಣವಾಗಿದೆ. ರಾಜೀನಾಮೆಗೆ ಕಾರಣ ತಿಳಿದುಬಂದಿಲ್ಲ.

## ನಾಲ್ವರ ವಿರುದ್ದ ಪ್ರಕರಣ ದಾಖಲು

ಪಡೆಯಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗುರುವಾರದಂದು ಬಸ್ಸಿನಲ್ಲಿ ಸಾಗಾಟ ಮಾಡುತ್ತಿದ್ದ ಒಟ್ಟು 2 ಲಕ್ಷ 50 ಸಾವಿರ ರೂ. ಮೌಲ್ಯದ ತುಳಸಿ ಮತ್ತು ಬಾಬಾ ತಂಬಾಕಿನ 20,600 ಸಣ್ಣ ಪುಡಿಗಳು ಹಾಗೂ ಬಸ್ಸು ಅನ್ನು ಜಪ್ತಿ ಮಾಡಿ, 4 ಜನರ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಐಪಿಎಸ್ ಪ್ರದೀಪ್ ಗುಂಟಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಚಂದ್ರಕಾಂತ್ ಪೂಜಾರಿ ಅವರ ನಿರ್ದೇಶನದಂತೆ ಹಾಗೂ ಹುಮನಾಬಾದ್ ಪೊಲೀಸ್ ಉಪಾಧೀಕ್ಷಕ ಜೆ.ಎಸ್ ನ್ಯಾಮಗೌಡರ್ ಅವರ ಮಾರ್ಗದರ್ಶನದಲ್ಲಿ ಮಂಠಾಳ ಪೊಲೀಸ್ ಠಾಣೆಯ ಪಿ.ಎಸ್.ಐ ಸುವರ್ಣ ಅವರು ಇಬ್ಬರು ಪಂಚರ ಜೊತೆ ಪೊಲೀಸ್ ಸಿಬ್ಬಂದಿಯಾದ ಮಲ್ಲಿಕಾರ್ಜುನ್, ಪ್ರಕಾಶ್, ಅನಿಲ್, ಶಿವರುದ್ರ, ಶಿವಲಿಂಗ್ ಅವರು ಬಸ್ಸಿನ ಡಿಕ್ಕಿ ಪರಿಶೀಲನೆ ನಡೆಸಿ, ಮಾದಕ ವಸ್ತು ವಶಪಡಿಸಿಕೊಳ್ಳಲಾಗಿದೆ ಎಂದಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ಮೂವರು ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದ್ದು, ಇನ್ನೊಬ್ಬ ಆರೋಪಿಯನ್ನು ಬಂಧಿಸಲಾಗುವುದು ಎಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ನಿರಾಶಾದಾಯಕ: ಸಚಿವ ಈಶ್ವರ ಖಂಡ್ರೆ

ವರ್ಷಗಳ ಕಾರ್ಯಕಾಲದಲ್ಲಿ ಹಿಂದೆಂದೂ ಕಂಡು ಕೇಳರಿಯದಷ್ಟು ನಿರುದ್ಯೋಗ ಸಮಸ್ಯೆ ಉಲ್ಬಣಿಸಿದೆ. ಈ ಬಜೆಟ್ ನಲ್ಲಿ ಕೂಡ ದುಡಿಯುವ ಯುವಕರ ಕೈಗೆ ಉದ್ಯೋಗ ನೀಡುವ ಯೋಜನೆ ರೂಪಿಸದಿರುವುದು ದುರ್ದೈವ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕ ಕಡೆಗಣಿಸಿದ ಕೇಂದ್ರ:ಈಶ್ವರ ಖಂಡ್ರೆ ಕಿಡಿ

ಹಿಂದುಳಿದ ಈಶಾನ್ಯ ಭಾರತದ ಅಭಿವೃದ್ಧಿಗೆ ಆದ್ಯತೆ ನೀಡುವ ಕೇಂದ್ರ ಸರ್ಕಾರ, ಹಿಂದುಳಿದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕಿಂಚಿತ್ತೂ ಗಮನ ಹರಿಸದೆ ಕಡೆಗಣಿಸಿರುವುದಕ್ಕೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಿಡಿ ಕಾರಿದ್ದಾರೆ.

ಕೇಂದ್ರ ಬಜೆಟ್ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ಹಿಂದುಳಿದ ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳ ಅಭಿವೃದ್ಧಿಗೆ 5 ಸಾವಿರ ಕೋಟಿ ರೂಪಾಯಿಗಳನ್ನು ಹಂಚಿಕೆ ಮಾಡುವಂತೆ ಕೇಂದ್ರ ಹಣಕಾಸು ಸಚಿವರಿಗೆ ಮನವಿ ಮಾಡಿದ್ದರು. ಆದರೆ, ಇದಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

## ಜನರಿಗೆ ತಲುಪಿಸುವ ಬಜೆಟ್

ಹೇಳಿದರು.ಗಿಗ್ ಕಾರ್ಮಿಕರ ಕಲ್ಯಾಣ ಕ್ರಮಗಳು ಕಾರ್ಮಿಕರ ಘನತೆಗೆ ಸರ್ಕಾರದ ಬದ್ಧತೆಯನ್ನು ಒತ್ತಿಹೇಳುತ್ತವೆ ಎಂದು ಮೋದಿ ಹೇಳಿದರು. ಉತ್ಪಾದನಾ ವಲಯಕ್ಕಾಗಿ ಬಜೆಟ್‌ನಲ್ಲಿ ಮಂಡಿಸಲಾದ ಕ್ರಮಗಳು ಭಾರತೀಯ ಉತ್ಪನ್ನಗಳು ಜಾಗತಿಕವಾಗಿ ಬೆಳಗಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು.

ತೆರಿಗೆ ವಿನಾಯಿತಿ ಮಧ್ಯಮ ವರ್ಗ ಮತ್ತು ಸಂಬಳ ಪಡೆಯುವ ಉದ್ಯೋಗಿಗಳಿಗೆ ಬಜೆಟ್ ದೊಡ್ಡ ಪ್ರಯೋಜನಗಳನ್ನು ನೀಡುತ್ತದೆ. ರೈತರಿಗಾಗಿ ಬಜೆಟ್‌ನಲ್ಲಿನ ಘೋಷಣೆಗಳು ಕೃಷಿ ವಲಯ ಮತ್ತು ಗ್ರಾಮೀಣ ಆರ್ಥಿಕತೆಯಲ್ಲಿ ಕ್ರಾಂತಿಯನ್ನುಂಟು ಮಾಡುತ್ತವೆ.

"ಸುಧಾರಣೆಗಳ ವಿಷಯಕ್ಕೆ ಸಂಬಂಧಿಸಿದಂತೆ, ಈ ಬಜೆಟ್‌ನಲ್ಲಿ ಹಲವು ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಪರಮಾಣು ಶಕ್ತಿಯಲ್ಲಿ ಖಾಸಗಿ ವಲಯವನ್ನು ಪ್ರೋತ್ಸಾಹಿಸುವುದು ಐತಿಹಾಸಿಕವಾಗಿದೆ. ಇದು ದೇಶದ ಅಭಿವೃದ್ಧಿಯಲ್ಲಿ ನಾಗರಿಕ ಪರಮಾಣು ಶಕ್ತಿಯ ದೊಡ್ಡ ಕೊಡುಗೆಯನ್ನು ಖಚಿತಪಡಿಸುತ್ತದೆ" ಎಂದು ಪ್ರಧಾನಿ ಹೇಳಿದರು.

# ಮನೆಯ ಹಿರಿ ಜೀವಿಗಳನ್ನು ಕಡೆಗಣಿಸದೆ ಜೀವನ ಸಾಗಿಸಿ : ಕಳಕಪ್ಪ ಕಂಬಳಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.1:ಕುಕನೂರನವ ದಂಪತಿಗಳು ಒಗ್ಗಟ್ಟಿನಿಂದ ಸ್ನೇಹ ಪ್ರೀತಿಯಿಂದ ಕಷ್ಟ ಸುಖವನ್ನು ಸರಿ ಸಮನಾಗಿ ಸ್ವೀಕರಿಸುತ್ತಾ ಕುಟುಂಬವನ್ನು ಜೀವನಪೂರ್ತಿ ಮುನ್ನಡೆಸಬೇಕು. ತಂದೆ ತಾಯಿಗಳನ್ನು ಹಾಗೂ ಮನೆಯ ಹಿರಿಯ ಜೀವಿಗಳನ್ನು ಕಡೆಗಣಿಸದಂತೆ ಜೀವನ ಸಾಗಿಸಿ ಎಂದು ದಾಂಪತ್ಯ ಜೀವನಕ್ಕೆ ಕಾಲಿಟ್ಟ ಜೋಡಿಗಳಿಗೆ ತಾಲೂಕು ಪಂಚಾಯಿತಿ ಮಾಜಿ ಉಪಾಧ್ಯಕ್ಷ, ಮುಖಂಡ ಕಳಕಪ್ಪ ಕಂಬಳಿ ಸಲಹೆ ನೀಡಿದರು.

ಪಟ್ಟಣದ ಮುಂಡರಗಿ ಶ್ರೀ ಅನ್ನದಾನೀಶ್ವರ ಶಾಖಾಮಠದಲ್ಲಿ ಶ್ರೀ ಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳ 2ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ನಡೆದ 09 ಜೋಡಿಗಳ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಪ್ರಪ್ರಥಮ ಬಾರಿಗೆ ಕುಕನೂರು ಪಟ್ಟಣದ ಶ್ರೀ ಮಠದಿಂದ ವಿಶೇಷ ಚೇತನರ ಮೂರು



ಜೋಡಿಗಳ ಸಾಮೂಹಿಕ ವಿವಾಹ ಹಮ್ಮಿಕೊಂಡಿರುವುದು ಶ್ಲಾಘನೀಯ ಕಾರ್ಯ. ಈ ನಾಡಿನ ಮಠ ಮಾನ್ಯಗಳು ಸಾಮಾಜಿಕವಾಗಿ, ಧಾರ್ಮಿಕವಾಗಿ ಮತ್ತು ಶೈಕ್ಷಣಿಕವಾಗಿ ಸಾಕಷ್ಟು ಸೇವೆ ಮಾಡುತ್ತಾ ಬರುತ್ತಿವೆ, ಮಠಗಳಿಗೆ ಭಕ್ತರ ಕಲ್ಯಾಣವೇ ಮುಖ್ಯ ಆದ್ದರಿಂದ ಮಠ ಮಾನ್ಯಗಳಿಗೆ ಉಳ್ಳವರು ಸಹಾಯ ಸಹಕಾರ ನೀಡಬೇಕು ಮಹದೇವ ಮಹಾಸ್ವಾಮಿಗಳು ಮಠದ ನೇತೃತ್ವವಹಿಸಿಕೊಂಡಿದ್ದರಿಂದ ಮಠದ ಚಿತ್ರಣವೇ ಬದಲಾಗಿವೆ. ದಾಂಪತ್ಯ ಜೀವನಕ್ಕೆ ಪಾದರ್ಪಣೆ ಮಾಡಿದ ನವಜೋಡಿಗಳು ಪರಸ್ಪರ ಅರ್ಥ ಮಾಡಿಕೊಂಡು ಮನೆಯ ಹಿರಿಯರಿಗೆ ಗೌರವ ಸಲ್ಲಿಸುತ್ತಾ ಜೀವನ ನಡೆಸಬೇಕು ಎಂದರು.

ನಂತರ ಮಾತನಾಡಿದ ಹಿರಿಯ ಮುಖಂಡ ವೀರಯ್ಯ ತೋಂಟದಾರ್ಯಮಠ ಮಾತನಾಡಿ, ನಮ್ಮ ಶ್ರೀಮಠ ಹಲವಾರು ಕಾರ್ಯಕ್ರಮಗಳನ್ನ ಪೂಜ್ಯರ 2ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಹಮ್ಮಿಕೊಂಡಿದೆ ಇದಕ್ಕೆಲ್ಲ ಭಕ್ತರ ಸಹಕಾರ ದೊಡ್ಡದು, ಪೂಜ್ಯರ ಮಾರ್ಗದರ್ಶನದಲ್ಲಿ ಭಕ್ತರ ಕಾಣಿಕೆಯಿಂದ ಶ್ರೀಮಠ ಅಭಿವೃದ್ಧಿಗೊಳ್ಳುತ್ತಿದೆ ಎಂದರು.

ವಿಶೇಷ ಚೇತನರ 03 ಜೋಡಿ ಸೇರಿ 09 ಜೋಡಿಗಳ ಸಾಮೂಹಿಕ ವಿವಾಹ ಜರುಗಿತು. ಶ್ರೀಮಠಕ್ಕೆ ಸೇವೆ ಸಲ್ಲಿಸಿದ ರೈತರಿಗೆ, ಪತ್ರಕರ್ತರಿಗೆ, ಕಾರ್ಯಕ್ರಮಕ್ಕೆ ಬಂದ ಮುಖಂಡರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಒಪ್ಪತ್ತೇಶ್ವರ ಶ್ರೀಗಳು, ಯಲಬುರ್ಗಿಯ ಶ್ರೀ ಮುರುಡಿ ಮಠದ ಶ್ರೀಗಳು, ಹಾಗೂ ಇಟಗಿಯ ಗದ್ದಿಗೆಪ್ಪಜ್ಜನವರು, ಅಂದಪ್ಪ ಜವಳಿ, ವೀರಣ್ಣ ಅಣಿಗೇರಿ, ಶಿವಕುಮಾರ್ ನಾಗಲಾಪುರಮಠ, ದೇವಪ್ಪ ಸೋಬಾನದ, ರಶೀದ್ ಅಹ್ಮದ್ ಅಣಿಜಗೇರಿ, ಹನಮಂತಪ್ಪ ಹಂಪನಾಳ್, ಡಾ. ಜಂಬಣ್ಣ ಅಂಗಡಿ, ಈರಣ್ಣ ಶಿವಶಕ್ತಿ, ಲಕ್ಷ್ಮಣ ಕಾಳಿ, ಸಂಗಮೇಶ ಕಲ್ಮಠ, ನಾಗರಾಜ ಬೆಣಕಲ್, ಮುರಾರಿ ಭಜಂತ್ರಿ ಸೇರಿದಂತೆ ಮಠದ ಭಕ್ತಾದಿಗಳು ಸಾರ್ವಜನಿಕರು ಇತರರು ಉಪಸ್ಥಿತರಿದ್ದರು.

# ನಿಯಮಬಾಹಿರವಾಗಿ ಸಾಲ ವಸೂಲಾತಿಗೆ ಮುಂದಾದರೆ ಕಠಿಣ ಕ್ರಮ: ಡಿ.ಸಿ ನಿತೀಶ್ ಕೆ ಎಚ್ಚರಿಕೆ

ರಾಯಚೂರು ಫೆ.01 :ಕ್ರೋಫೈನಾನ್ಸಗಳಿಂದ ಜಿಲ್ಲೆಯಲ್ಲಿ ನಿಯಮ ಬಾಹಿರವಾಗಿ ಸಾಲ ವಸೂಲಾತಿಗೆ ಮುಂದಾದರೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಎಚ್ಚರಿಕೆ ನೀಡಿದರು.

ಫೆ.01ರ ಶನಿವಾರ, ನಗರದ ಜಿಲ್ಲಾ ಪಂಚಾಯತ್ ಕಚೇರಿಯ ಜಲ ನಿರ್ಮಲ ಸಭಾಂಗಣದಲ್ಲಿ ಮೈಕ್ರೋಫೈನಾನ್ಸ್ ಪ್ರತಿನಿಧಿಗಳು, ಬ್ಯಾಂಕಿನ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಲ ವಸೂಲಿ ಮಾಡುವಾಗ ಆರ್‌ಬಿಐ ಮಾರ್ಗಸೂಚಿಗಳನ್ನು ಕಡ್ಡಾಯ ಪಾಲಿಸಬೇಕು. ಸಾಲ ವಸೂಲಾತಿ ವೇಳೆ ಆರ್‌ಬಿಐ ನಿಯಮದಂತೆ



ನಡೆದುಕೊಳ್ಳಬೇಕು. ಕಾನೂನು ಬಾಹಿರವಾಗಿ ಸಾಲ ವಸೂಲಾತಿಗೆ ಮುಂದಾದರೆ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಸಾಲ ನೀಡಬೇಡಿ ಅಥವಾ ಸಾಲಗಾರರಿಂದ ಸಾಲ ವಸೂಲಿ ಮಾಡಬೇಡಿ ಎಂದು ಹೇಳುವುದಿಲ್ಲ. ಆದರೆ, ಸಾಲ ವಸೂಲಿ ಮಾಡುವಾಗ ಜನರನ್ನು ಹಿಂಸಿಸಬಾರದು ಮತ್ತು ಕಿರುಕುಳ ನೀಡಬಾರದು ಎಂದು ತಿಳಿಸಿದರು.

ಕಿರುಕುಳ ನೀಡಿಬೇಡಿ: ರಾಯಚೂರ ಹಿಂದುಳಿದ ಜಿಲ್ಲೆಯಾಗಿದ್ದು, ಇಲ್ಲಿನ ಜನರಿಗೆ ಹಣದ ಅವಶ್ಯಕತೆ ಇರುತ್ತದೆ. ಅದನ್ನೇ ಬಂಡವಾಳವಾಗಿ ಮಾಡಿಕೊಂಡು ಜನರಿಗೆ ಹೆಚ್ಚಿನ ಮಟ್ಟದಲ್ಲಿ ಹಣ ನೀಡಿ ಕಂಪನಿಗಳಿಂದ ಕಿರುಕುಳ ನೀಡಿದಲ್ಲಿ ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಮೈಕ್ರೋ ಫೈನಾನ್ಸ್ ಹಾಗೂ ಸಾಲ ಪಡೆದವರ ನಡುವೆ ಯಾವುದಾದರೂ ದೂರು ಬಂದಲ್ಲಿ ತಕ್ಷಣ ಕ್ರಮ ಕೈಗೊಳ್ಳಬೇಕು. ಮೈಕ್ರೋ ಫೈನಾನ್ಸಗಳ ಅಮಾನುಷ ವರ್ತನೆಯ ಘಟನೆಗಳು ಗಮನಕ್ಕೆ ಬಂದ ಕೂಡಲೇ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸೌಜನ್ಯದಿಂದ ವರ್ತಿಸಿ: ಮರುಪಾವತಿ ಸಾಮರ್ಥ್ಯದ ಬಗ್ಗೆ ತಿಳಿದುಕೊಳ್ಳದೆ ಸಾಲ ನೀಡುವುದು ತಪ್ಪಾಗುತ್ತದೆ. ಇದನ್ನರಿಯಬೇಕು. ಸಾಲ ನೀಡುವ ಸಂದರ್ಭದಲ್ಲಿ ಸಾಲ ಪಡೆಯುವವರಿಗೆ ಸಾಲ ಮರುಪಾವತಿಯ ಷರತ್ತು ವಿವರಿಸಬೇಕು. ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಡ್ಡಾಯ ಗುರುತಿನ ಚೀಟಿ ಧರಿಸಿ ಸಾಲ ವಸೂಲಾತಿಗೆ ತೆರಳಬೇಕು. ಸೌಜನ್ಯದಿಂದ ವರ್ತಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

144 ಲೇವಾದೇವಿ, ಹಣಕಾಸು ಸಂಸ್ಥೆಗಳು: ಜಿಲ್ಲೆಯಲ್ಲಿ 52 ಲೇವಾದೇವಿಗಾರರು, 33 ಗಿರವಿದಾರರು 59 ಹಣಕಾಸು ಸಂಸ್ಥೆಗಳು ಸೇರಿದಂತೆ ಒಟ್ಟು 144 ಲೇವಾದೇವಿಗಾರರು, ಗಿರವಿದಾರರು ಹಾಗೂ ಹಣಕಾಸು ಸಂಸ್ಥೆಗಳಿವೆ ಎಂದು ಸಹಕಾರ ಸಂಘಗಳ ಉಪ ನಿಬಂಧಕರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸಸ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ, ಲೀಡ್ ಬ್ಯಾಂಕ್ ಮ್ಯಾನೇಜರ್ ಟಿ.ತಿರುಮಲೇಶ್, ಸಹಕಾರ ಸಂಘಗಳ ಉಪ ನಿಬಂಧಕರಾದ ಮನೋಹರ ಸೇರಿದಂತೆ ಇತರರು ಇದ್ದರು.

# ಚಿಕ್ಕಮಂಗಳೂರು ಜಿಲ್ಲಾಧಿಕಾರಿಗಳ ದುರಾಡಳಿತ ಖಂಡಿಸಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.1 ಜಿಲ್ಲೆ ಕುಕನೂರು ತಾಲೂಕಿನ ಕಂದಾಯ ಇಲಾಖೆಯ ನೌಕರರಿಂದ ಚಿಕ್ಕಮಂಗಳೂರು ಜಿಲ್ಲಾಧಿಕಾರಿಗಳ ದುರಾಡಳಿತ ದೌರ್ಜನ ಖಂಡಿಸಿ ಕುಕನೂರು ತಾಸಿಲ್ದಾರರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಚಿಕ್ಕಮಂಗಳೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಶ್ರೀಮತಿ ಮೀನಾ ನಾಗರಾಜ ಮತ್ತು ಅಪರ ಜಿಲ್ಲಾಧಿಕಾರಿ ಕನಕರೆಡ್ಡಿ ಅವರು 4.1. 2025 ರಂದು ಕೆ ಎಸ್ ಡಬ್ಲ್ಯೂ ಏ ಏನ್ ಸಭೆಯನ್ನು ತೆಗೆದುಕೊಂಡು ಜಿಲ್ಲೆಯ 29 ಗ್ರಾಮ ಆಡಳಿತ ಅಧಿಕಾರಿಗಳನ್ನು ಯಾವುದೇ ತಿಳುವಳಿಕೆ ನೀಡದೆ ವಿಚಾರಣೆ ನಡೆಸದೆ ಏಕಾಏಕಿ ಸಂಚಿತ ಪರಿಣಾಮ ರಹಿತವಾಗಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ದಂಡ ವಿಧಿಸಿ ಆದೇಶಿಸಿರುತ್ತಾರೆ.

ಆದರೆ ವಾಸ್ತವ್ಯವಾಗಿ ಮಾನ್ಯ ಜಿಲ್ಲಾಧಿಕಾರಿಗಳು ನಡೆಸಿದ ಫತಿಚಿಟಿ ಸಭೆಯಲ್ಲಿ ಹಾಜರಾಗಿದ್ದವರನ್ನು ಅನುಮತಿ ಮೇರೆಗೆ ರಜಾ ಹಾಕಿದವರನ್ನು ಗರ್ಭಿಣಿ ಮಹಿಳೆ ಆಸ್ಪತ್ರೆಗೆ ಅನುಮತಿ ಪಡೆದುಕೊಂಡು ಹೋದರು ಕೂಡ ಅತ್ಯುತ್ತಮವಾಗಿ ಕೆಲಸ ನಿರ್ವಹಿಸಿದ ಶೇಕಡ 90%ರಷ್ಟು ಮೇಲ್ಪಟ್ಟ ಪ್ರಗತಿ ಸಾಧಿಸಿದವರನ್ನು ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿ ಸುದೀರ್ಘ ರಾತ್ರಿ 7 ರವರೆಗೆ ಸಭೆಯಲ್ಲಿ ಕುಣಿತ ಪರಿಣಾಮವಾಗಿ ಅನಿವಾರ್ಯವಾಗಿ ನ್ಯಾಯಾಲಯ ಪ್ರಕರಣಕ್ಕೆ ಅನುಮತಿ ಪಡೆದು ಹೋದವರನ್ನು ದಂಡನೆಯ ಆದೇಶದಲ್ಲಿ ಉಲ್ಲೇಖಿಸಿರುವ ಯಾವುದೇ ತಿಳುವಳಿಕೆಯನ್ನು ಕೂಡ ನೀಡದೆ ಕೆ.ಸಿ. ಎಸ್ ಆರ್ ನಿಯಮಗಳನ್ನು ಉಲ್ಲಂಘಿಸಿ ಮನಬಂದಂತೆ ತಮ್ಮ ಹುದ್ದೆಯ ಅಧಿಕಾರವನ್ನು



ದುರುಪಯೋಗಪಡಿಸಿಕೊಂಡು ಅದೀನ ನೌಕರನ್ನು ತಮ್ಮ ಆದೇಶದ ಮೂಲಕ ಶಿಕ್ಷಿಸಿ ದರ್ಪ ಮೆರೆದು ಕರ್ತವಲೋಪ ಎಸಗಿರುತ್ತಾರೆ. ಈ ಸಂಬಂಧ ದಂಡನೆಗೆ ಒಳಗಾದ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಜಿಲ್ಲೆಯ ಇತರೆ ಗ್ರಾಮದ ಅಧಿಕಾರಿಗಳು ದಿನಾಂಕ 25.1.2025 ರಂದು ಮನವಿ ಮಾಡಲು ಹೋದಾಗ ಸದರಿ ಅವರ ಅಹವಾಲನ್ನು ಕೇಳುವುದಿಲ್ಲ ಎಂದು ಗದರಿಸಿ ಕಳಿಸಿದ್ದಾರೆ.

ಈ ವಿಚಾರವಾಗಿ ರಾಜ್ಯ ಸಂಘದ ವತಿಯಿಂದ ಕರೆ ಮಾಡಿ ಮನವಿ ಮಾಡಿದರು ಕೂಡ ಸ್ಪಂದಿಸಿರುವುದಿಲ್ಲ. ಈ ಸಮಸ್ಯೆ ವಿಚಾರವಾಗಿ ನೇರವಾಗಿ ಮಾತನಾಡಲು ಅವಕಾಶ ಕೋರಿದರು ಕೂಡ ಮಾನ್ಯ ಜಿಲ್ಲಾಧಿಕಾರಿಗಳು ನೀವು ಬರುವ ಅವಶ್ಯಕತೆ ಇಲ್ಲ ನಿಮ್ಮ ಕೆಲಸ ನೀವು ನೋಡಿಕೊಳ್ಳಿ ಎಂದು ತಿಳಿಸಿದ್ದು ಅದ್ಯಾಗು ಸಹ ನಂತರ ರಾಜ್ಯ ಸಂಘದ ವತಿಯಿಂದ ದಿನಾಂಕ : 28.01.2025 ರಂದು ಪುನಃ ದಂಡನೆಗೆ ಅಧಿಕಾರಿಗಳೊಂದಿಗೆ ಮನವಿ ಮಾಡಲು ಹೋದಾಗ ಜಿಲ್ಲಾಧಿಕಾರಿಗಳ ಕೊಠಡಿಯ ಮುಂದೆ ಸಂಜೆ 4 ರಿಂದ 6.30ರ ರವರೆಗೆ ಕಾದ ನಂತರ ಸಂಜೆ 6:30ರಂದು 7:30ರ ಜಿಲ್ಲಾಧಿಕಾರಿಗಳು ಕೊಠಡಿ ಮುಂಭಾಗದಲ್ಲಿ ಅವರ ಭೇಟಿಗಾಗಿ ಕಾದು ನಿಂತುಕೊಂಡು ನಂತರ 7:30ಕ್ಕೆ ಜಿಲ್ಲಾಧಿಕಾರಿಗಳು ಹೊರಭಾಗದಲ್ಲಿ ಕಾಯುತ್ತಿದ್ದ 60 ರಿಂದ 70 ತಮ್ಮ ಅದೀನ ನೌಕರರನ್ನು ಯಾವ ಕಾರಣಕ್ಕೆ ಭೇಟಿ ಮಾಡಲು ಬಂದಿದ್ದೀರಾ ಎಂಬುದನ್ನು ಕೂಡ ಕೇಳದೆ ನೇರವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತಿದ್ದ ಕಾರ್ಯಕ್ರಮಕ್ಕೆ ತೆರಳಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಸ್ವಾದಿಸಿ ನಂತರ 7:30 ರಿಂದ 9.30 ಗಂಟೆಯವರೆಗೂ ಮತ್ತೆ ಅದೇ ಕಚೇರಿಗೆ ಬರುವ ಮಾಹಿತಿ ನೀಡದ ಜಿಲ್ಲಾಧಿಕಾರಿಗಳು ವೇದಿಕೆಯ ಎಲ್ಲಾ ಕಾರ್ಯಕ್ರಮಗಳು ಮುಗಿಸಿ ಅಲ್ಲಿಂದ ನೇರವಾಗಿ ತಮ್ಮ ಬಂಗಲೆಗೆ ತೆರಳಿರುತ್ತಾರೆ .

ಈ ಸಂದರ್ಭದಲ್ಲಿ ನೌಕರರು ಅವರ ಕೊಠಡಿ ಮುಂಭಾಗದಲ್ಲಿ ಕಾಯುತ್ತಿರುವ ವಿಚಾರವನ್ನು ಜಿಲ್ಲಾಧಿಕಾರಿಗಳ ಆಪ್ತ ಸಹಾಯಕರು ಮತ್ತು ನಾವು ಕರೆ ಮತ್ತು ವ್ಯಾಟ್ಸಪ್ ಸಂದೇಶ ಮೂಲಕ ತಿಳಿಸಿದರು ಯಾವುದೇ ಪ್ರತಿಕ್ರಿಯೆ ನೀಡದೇ ಇರುತ್ತಾರೆ ಎಂದು ತಿಳಿಸಿದ್ದರು.

ಈ ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲಾ ಜಿಲ್ಲಾಧಿಕಾರಿಗಳಾದ ಶ್ರೀಮತಿ ಮೀನಾ ನಾಗರಾಜ್ ಮತ್ತು ಅಪರ ಜಿಲ್ಲಾಧಿಕಾರಿ ಶ್ರೀ ಕನಕ ರೆಡ್ಡಿ ಅವರುಗಳ ಸರ್ಕಾರದ ಸುತ್ತೋಲೆಗಳ ವಿರುದ್ಧವಾದ ನಡವಳಿಕೆಗಳು ಹಾಗೂ ನಿಯಮ ಬಾಹಿರ ಆದೇಶಗಳು ಹಾಗೂ ದರ್ಪ ತುಂಬಿದ ನಡವಳಿಕೆಗಳ ಕಾರಣದಿಂದಾಗಿ ರಾಜ್ಯದ್ಯಂತ ಕಂದಾಯ ಇಲಾಖೆಯ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರದ ಎಲ್ಲಾ ಜನಪರ ಯೋಜನೆಗಳನ್ನು ಮನೆ ಬಾಗಿಲಿಗೆ ತಲುಪಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯ ದಕ್ಕೆಯಾಗಿರುತ್ತದೆ.

ಈ ಹಿನ್ನಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಸ್ವಾತಂತ್ರ ಪೂರ್ವದ ಬ್ರಿಟಿಷ್ ಆಳ್ವಿಕೆ ಮಾದರಿಯನ್ನು ಜೀವಂತವಾಗಿರಿಸಿ ದೂರಾಡಳಿತ ನಡೆಸುತ್ತಿರುವ ಜಿಲ್ಲಾಧಿಕಾರಿಗಳ ವಿರುದ್ಧ ಶ್ರೀಮತಿ ಮೀನಾ ನಾಗರಾಜ್ ಮತ್ತು ಅಪರ ಜಿಲ್ಲಾಧಿಕಾರಿ ಕನಕರೆಡ್ಡಿ ಅವರನ್ನು ಈ ಕೂಡಲೇ ಚಿಕ್ಕಮಂಗಳೂರು ಜಿಲ್ಲೆಯಿಂದ ಕೂಡಲೇ ವರ್ಗಾಯಿಸಿ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಗೆ ಜಿಲ್ಲಾಧಿಕಾರಿ/ ಅಪರ ಜಿಲ್ಲಾಧಿಕಾರಿಯಾಗಿ ಸ್ಥಳ ನಿಯುಕ್ತಿಗೊಳಿಸದೆ ಸದರಿ ಯವರು ಮಾಡಿರುವ ಕಾನೂನು ಬಾಹಿರ ಮತ್ತು ಅಧೀನ ನೌಕರ ವಿರೋಧಿ ಆದೇಶಗಳನ್ನು ವಿಚಾರಣೆ ನಡೆಸಿ ಕಾನೂನು ರೀತಿ ಕ್ರಮಗಳನ್ನು ಕೈಗೊಂಡು ಕಂದಾಯ ಇಲಾಖೆಯ 9000 ನೌಕರರಿಗೆ ನ್ಯಾಯ ಒದಗಿಸುವಂತೆ ಕುಕನೂರು ತಾಸಿಲ್ದಾರರ ಮುಖಾಂತರ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಲಾಯಿತು.

ಕುಕುನೂರು ತಾಲೂಕಿನ ಗ್ರಾಮ ಆಡಳಿತಾಧಿಕಾರಿಗಳ ಸಂಘದ ಅಧ್ಯಕ್ಷರಾದ ಸುರೇಶ ಕ್ಯಾದಗುಂಪಿ, ಪ್ರಧಾನ ಕಾರ್ಯದರ್ಶಿ ಪೀರಸಾಬ ಲಕ್ಕುಂಡಿ, ಉಪಾಧ್ಯಕ್ಷರ ಶರೀಫ್ ನದಾಫ್, ಖಜಾಂಚಿ ವೀರಣ್ಣ ತಗ್ಗಿನಮನಿ, ಜಿಲ್ಲಾ ಖಜಾಂಚಿ ಮಹೇಶ್ ಗೌಡ, ಮಮತಾ ಕವಾಡಿ, ಹನುಮೇಶ್ ಮಾಳೆಕೊಪ್ಪ, ಹಾಗೂ ತಾಲೂಕಿನ ಗ್ರಾಮ ಆಡಳಿತ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಶಸ್ತ್ರ-ಶಾಸ್ತ್ರ ಪ್ರವೀಣ ಮಾಚಯ್ಯ : ಮಡಿವಾಳರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.1–12ನೇ ಶತಮಾನದಲ್ಲಿ ನಡೆದ ಕಲ್ಯಾಣ ಕ್ರಾಂತಿಯಲ್ಲಿ ಬಿಜ್ಜಳನ ಕೋಪಕ್ಕೆಗುರಿಯಾಗಿ ರಚಿಸಿದ ವಚನಗಳನ್ನು ರಕ್ಷಿಸಿಕೊಳ್ಳಲು ಮಡಿವಾಳ ಮಾಚಯ್ಯ ಶಸ್ತ್ರ–ಶಾಸ್ತ್ರ ಪ್ರವೀಣರಾಗಿದ್ದರೆಂದು ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಎ.ಎಂ. ಮಡಿವಾಳರ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶನಿವಾರ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಮಡಿವಾಳ ಮಾಚಿದೇವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು,ಮಡಿವಾಳ ಮಾಚಿದೇವನಾದಿಯಾಗಿ ಬಸವಾದಿ ಪ್ರಮಥರೆಲ್ಲ ನಮ್ಮ ಉತ್ತರ ಕರ್ನಾಟಕದವರೇ ಆಗಿದ್ದು, ಇಂತಹ ನೆಲದಲ್ಲಿ ಜನಿಸಿದ ನಾವೆಲ್ಲರೂ ಧನ್ಯರು ಎಂದರು.

ಶರಣರು ಆರ್ಥಿಕವಾಗಿ ದುರ್ಬಲರಾಗಿದ್ದರೂ ತಮ್ಮ ಕಾಯಕ ನಿಷ್ಠೆ, ಆಚಾರ ವಿಚಾರದಲ್ಲಿ ರಾಜನಿಗೂ ಹೆದರದಂತ ಗಟ್ಟಿಗುಂಡಿಗೆ ಉಳ್ಳವರಾಗಿದ್ದರು. ಮಡಿವಾಳ ಮಾಚಿದೇವ ಬಟ್ಟೆ ತೊಳೆಯುವ ಕಾರ್ಯ ಮಾಡುತ್ತಿದ್ದು, ಕೇವಲ ಶರಣರ ಹಾಗೂ ಸುಸಂಸ್ಕೃತರ ಬಟ್ಟೆಯನ್ನು ತೊಳೆಯುತ್ತಿದ್ದರು. ದುರ್ನಡತೆಯ ಜನರ ಬಟ್ಟೆಗಳನ್ನು ತೊಳೆಯುತ್ತಿರಲಿಲ್ಲ. ಇದರಿಂದ ಕುಪಿತನಾತ ಬಿಜ್ಜಳ ಇವರ ಮೇಲೆ ದಾಳಿ ಮಾಡಲು ಯತ್ನಿಸಿದಾಗ ಪ್ರಾಣ ರಕ್ಷಣೆಗಾಗಿ ಕಲಿ ಆಚಾರ್ಯರ ಬಳಿ ಶಸ್ತ್ರ ವಿದ್ಯೆಯನ್ನು ಮಲ್ಲಿಕಾರ್ಜುನ ಸ್ವಾಮಿ ಬಳಿ ಶಾಸ್ತ್ರ ವಿದ್ಯೆ ಕಲಿತು ವೀರಗಣಾಚಾರಿ ಎನಿಸಿಕೊಂಡರು ಎಂದರು.



ಕಲ್ಯಾಣ ಕ್ರಾಂತಿ ಸಮಯದಲ್ಲಿ ಬಿಜ್ಜಳ ಅನೇಕ ಶರಣರನ್ನು ಬಂಧನದಲ್ಲಿ ಇರಿಸಿದ್ದ. ಅಂತಹ ಎಲ್ಲ ಶರಣರನ್ನು ಬಿಡುಗಡೆಗೊಳಿಸಿದ ಕೀರ್ತಿ ಮಾಚಯ್ಯನವರದಾಗಿತ್ತು. ಆದ್ದರಿಂದಲೇ ಅವರನ್ನು ವೀರಗಂಟಿ ಮಾಚಯ್ಯ, ವೀರಭದ್ರನ ಅವತಾರ ಎಂದು ಕರೆಯಲ್ಪಟ್ಟರು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಗ್ರೇಡ್–1 ತಹಶೀಲ್ದಾರ ಎಂ.ಜಿ.ಬಿರಾದಾರ, 12ನೇ ಶತಮಾನದಲ್ಲಿ ಆಗಿಹೋದ ಶರಣರ ತತ್ವ ಆದರ್ಶಗಳನ್ನು 21ನೇ ಶತಮಾನದಲ್ಲಿದ್ದ ನಾವೆಲ್ಲರೂ ಪಾಲಿಸುತ್ತಿದ್ದೇವೆಯೇ ಎಂಬುದು ಆತ್ಮಾವಲೋಕ ಮಾಡಿಕೊಳ್ಳಬೇಕಿದೆ. ಶರಣರು 800 ವರ್ಷಗಳ ಹಿಂದೆ ಆಗಿ ಹೋಗಿದ್ದರೂ ಇಂದು ಕೂಡಾ ಸ್ಮರಿಸುತ್ತಿದ್ದೇವೆ. ಅದೇ ನಮ್ಮ ಪುರ್ವಜರ ಹೆಸರು ಕೂಡಾ ನಮಗೆ ನೆನಪಿಲ್ಲ. ಇದನ್ನು ಗಮನಿಸಿದಾಗ ಶರಣರ ಜೀವನ ಎಂತಹ ಮಹತ್ವದ್ದು ಎಂಬುದು ತಿಳಿಯುತ್ತದೆ ಎಂದರು.

ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಮಾಚಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ನಿವೃತ್ತ ಡಿಎಸ್‌ಪಿ ವಿಜಯಕುಮಾರ ಮಡಿವಾಳರ, ಸಮುದಾಯದ ಮುಖಂಡರಾದ ಕೃಷ್ಣಪ್ಪ ವೀರಘಂಟಿ, ಅಮರೇಶ ಕೊಳ್ಳಿ, ಶಂಕರ ಮಡಿವಾಳರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಸ್ವಾಗತಿಸಿದರು. ಶಂಕರಲಿಂಗ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು.

# ಗ್ರಾಮೀಣ ರಸ್ತೆಗಳ ಸುಧಾರಣೆಗೆ ಒತ್ತು:ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.1: ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದಲ್ಲಿ ಹದಗೆಟ್ಟಿರುವ ಗ್ರಾಮೀಣ ರಸ್ತೆಗಳ ಸುಧಾರಣೆಗೆ ಆದ್ಯತೆಯ ಮೇಲೆ ಕಾಮಗಾರಿ ಕೈಗೊಳ್ಳಲು ಯೋಜನೆ ರೂಪಿಸಲಾಗುತ್ತಿದೆ ಎಂದು ಶಾಸಕ ಎಚ್.ವಾಯ್.ಮೇಟಿ ಹೇಳಿದರು. ಬೂದಿಹಾಳ–ಬೋಡನಾಯಕದಿನ್ನಿ ಕ್ರಾಸ್ ವರೆಗಿನ ಜಿಲ್ಲಾ ಮುಖ್ಯ ರಸ್ತೆಯ ಕಿ.ಮೀ.7.63 ರಿಂದ 8.11 ಮತ್ತು 11.40 ರಿಂದ 12.70 ಕಿಮೀ ವರೆಗಿನ ರಸ್ತೆ ಸುಧಾರಣೆಯ 2 ಕೋಟಿ ರೂ.ಗಳ ಕಾಮಗಾರಿ ಹಾಗೂ ಪಂಚಾಯತರಾಜ್ ಇಂಜನೀಯರಿಂಗ್ ಉಪವಿಭಾಗದಿಂದ ಬೇವೂರ ಗ್ರಾಮದ ಸಿದ್ದಮ್ಮ ದೇವಸ್ಥಾನಕ್ಕೆ ಹೋಗುವ 10 ಲಕ್ಷ ರೂ.ಗಳ ರಸ್ತೆ ನಿರ್ಮಾಣ ಕಾಮಗಾರಿಗೆ ಶನಿವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಕಳೆದ ಮೂರ್ನಾಲ್ಕು ವರ್ಷಗಳಿಂದ ರಸ್ತೆಗಳ ಅಭಿವೃದ್ಧಿ ಆಗಿಲ್ಲ. ಗ್ರಾಮೀಣ ಭಾಗದ ರಸ್ತೆಗಳು ಸಹ ಬಹಳಷ್ಟು ಹದಗೆಟ್ಟಿದ್ದು, ಇಂತಹ ರಸ್ತೆಗಳನ್ನು ಆದ್ಯತೆಯ ಮೇಲೆ ದುರಸ್ಥಿಗೊಳಿಸಲಾಗುವುದು. ಸರ್ಕಾರ ರಸ್ತೆಗಳ ಸುಧಾರಣೆಗೆ ಹೆಚ್ಚು ಆದ್ಯತೆ ನೀಡುತ್ತಿದೆ ಎಂದ ಶಾಸಕ ಮೇಟಿ, ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಬೇವೂರ–ಬೋಡನಾಯಕದಿನ್ನಿ ಮಧ್ಯದ ಈ ರಸ್ತೆಯನ್ನು ಈಗ 2 ಕೋಟಿ ರೂ.ಗಳ ವೆಚ್ಚದಲ್ಲಿ ಸುಧಾರಣೆಗೊಳಿಸಲಾಗುತ್ತಿದ್ದು, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ನಿರ್ವಹಿಸಬೇಕು ಎಂದರು. ಈಗ ಕೈಗೊಂಡಿರುವ ರಸ್ತೆ ಸುಧಾರಣೆಯ ಹೊರತಾಗಿಯೂ ಬೋಡನಾಯಕದಿನ್ನಿ ಗ್ರಾಮಕ್ಕೆ ಹೊಂದಿಕೊಂಡು 95 ಮೀಟರ ರಸ್ತೆ ರಿಪೇರಿ ಕಾರ್ಯ ಹಾಗೇ ಉಳಿಯಲಿದ್ದು, ಕೆಲವೇ ದಿನಗಳಲ್ಲಿ ಅದನ್ನು ಸಹ ಸುಧಾರಣೆ ಮಾಡಲಾಗುವುದು ಎಂದು ಎಚ್.ವಾಯ್. ಮೇಟಿ ಹೇಳಿದರು. ಜಿಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ತಿಮ್ಮಾಪೂರ ಗ್ರಾಪಂ ಅಧ್ಯಕ್ಷ ರಮೇಶ ಕೊಳ್ಳಾರ, ಬೇವೂರ ಗ್ರಾಪಂ ಅಧ್ಯಕ್ಷೆ ಫರೀದಾ ಗುರಗುಣ್ಣಿ, ಸದಸ್ಯ ಶರಣಪ್ಪ ಮಾಗನೂರ, ಕುಮಾರ ಬಿಂಜವಾಡಗಿ, ಎಂ.ಎಸ್.ವೈಜಾಪೂರ, ಈರಪ್ಪ ಕಡೇಮನಿ, ನಿಂಗಪ್ಪ ಕೋಟಿ, ಮಲ್ಲಿಕಾರ್ಜುನ ಮೇಟಿ, ಮಡ್ಡೇಸಾಬ ಗುರಗುಣ್ಣಿ, ಲೋಕೋಪಯೋಗಿ ಇಲಾಖೆಯ ಎಇಇ ನಾರಾಯಣ ಕುಲಕರ್ಣಿ, ಕಿರಿಯ ಇಂಜನೀಯರ ಮಲ್ಲಿಕಾರ್ಜುನ ಹಾಲವರ, ಬೇವೂರ ಪಿಡಿಓ ಡಿ.ಬಿ.ಇಟಗಿ, ಗುತ್ತಿಗೆದಾರ ಸಂತೋಷ ಕುಂದರಗಿ ಮತ್ತಿತರರು ಇದ್ದರು.

# ಫೆ.3 ರಂದು ಬಸವಲಿಂಗ ಶಿವಾಚಾರ್ಯರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.1: ತಾಲೂಕಿನ ಖಟಕಚಿಂಚೋಳಿ ಗ್ರಾಮದ ಹುಗ್ಗೆಳ್ಳಿ ಹಿರೇಮಠ ಸಂಸ್ಥಾನದ ಶ್ರೀ ಬಸವಲಿಂಗ ಶಿವಾಚಾರ್ಯರ ನೂತನ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಫೆ. 3 ರಂದು ಬೆಳಿಗ್ಗೆ 8 ಗಂಟೆಯಿಂದಲೇ ನಡೆಯಲಿದೆ ಎಂದು ಹುಗ್ಗೆಳ್ಳಿ ಹಿರೇಮಠ ಸಂಸ್ಥಾನದ ಶ್ರೀ ಬಸವಲಿಂಗ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.3 ರಂದು ಸೋಮವಾರ ಬೆಳಿಗ್ಗೆ 8 ಗಂಟೆಗೆ ಶ್ರೀ ಬಸವಲಿಂಗ ಶಿವಾಚಾರ್ಯರ ಗದ್ದುಗೆಗೆ ವಿಶೇಷ ಪೂಜೆ, ರುದ್ರಾಭಿಷೇಕ ನಡೆಯುವುದು. ನಂತರ ಗ್ರಾಮದ ವಿವಿಧ ಬೀದಿಗಳಲ್ಲಿ ಶ್ರೀ ಬಸವಲಿಂಗ ಶಿವಾಚಾರ್ಯರ ಪಲ್ಲಕ್ಕಿ ಉತ್ಸವ ನಡೆಯಲಿದೆ. ಕಾರ್ಯಕ್ರಮದ ಸ್ವಾಗತಿ ಸಮಿತಿಯ ಅಧ್ಯಕ್ಷರಾಜ ಕಲಬುರಗಿಯ ವೈದ್ಯಡಾ| ಶಿವರಾಜ ಅಲಸೆಟ್ಟಿ ವಹಿಸಲಿದ್ದಾರೆ. ನಂತರ ನಡೆಯುವ ಧರ್ಮಸಭೆಯಲ್ಲಿ ಹುಡಗಿ ಗ್ರಾಮದ ಕಟ್ಟಿಮನಿ ಸಂಸ್ಥಾನ ಹಿರೇಮಠದ ಪೀಠಾಧಿಪತಿ ಶ್ರೀ ವಿರೂಪಾಕ್ಷ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸುವರು. ಹಿರೇನಾಗವನ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಗಳು, ಕಲಬುರಗಿ ಪಾಳಾದ ಶ್ರೀ ಗುರುಮೂರ್ತಿ ಶಿವಾಚಾರ್ಯರು, ಹಲಬರ್ಗಾದ ಶ್ರೀ ಹಾವಗಿಲಿಂಗ ಶಿವಾಚಾರ್ಯರು, ಬಸವಕಲ್ಯಾಣದ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಬಿಲಗುಂದಿಯ ಶ್ರೀ ಚಿದಾನಂದ ಶಿವಾಚಾರ್ಯರು, ಹುಡುಗಿಯ ಚನ್ನಮಲ್ಲ ಮಹಾಸ್ವಾಮಿಗಳು, ಚಾಂಬೋಳದ ಶ್ರೀ ರುದ್ರಮುನಿ ಶಿವಾಚಾರ್ಯರು ಸಾನಿಧ್ಯ ವಹಿಸುವರು. ಹುಗ್ಗೆಳ್ಳಿ ಹಿರೇಮಠದ ಶ್ರೀ ಬಸವಲಿಂಗ ಮಹಾಸ್ವಾಮಿಗಳು ನೇತೃತ್ವ ವಹಿಸುವರು. ಶ್ರೀ ರುದ್ರಮುನಿ ದೇವರು ಸಮ್ಮುಖ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.



ಕಾರ್ಯಕ್ರಮದಲ್ಲಿ ಸಂಸದ ಸಾಗರ ಈಶ್ವರ ಖಂಡ್ರೆ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ನೀಲಕಂಟ ಮಹಾಸ್ವಾಮಿಗಳು, ರಾಮಕೃಷ್ಣ ಶರಣರು, ಶಾಸಕ ಬಸವ್ರಆಜ ಮತ್ತಿಮುಡು, ವಿಧಾನಪರಿಷತ ಸದಸ್ಯ ಡಾ. ಚಂದ್ರಶೇಖರ ಪಾಟೀಲ, ದಿವ್ಯಾ ರಾಜೇಶ ಹಾಗುರಗಿ, ರೇವಣಸಿದ್ದ ಜಾಡರ, ರಮೇಶ ಅಲಶೆಟ್ಟಿ ಉಪಸ್ಥಿತರಿರುವರು.

ಇದೇವೇಳೆ ವಿಶ್ವನಾಥ ಉಂಬುರಗೆ, ವಿಯಕುಮಾರ ಅಲಶೆಟ್ಟಿ, ಆನಂದ ಬೇಲೂರೆ, ಮೈಬುಸಾಬ್ ರಸುಲಸಾಬ್ ರವರಿಗೆ ವಿಶೇಷ ಗೌರವ ಸನ್ಮಾನ ನಡೆಯಲಿದೆ ಎಂದು ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಜ್ಞಾನವಂತರಾಗಿ ರಾಷ್ಟ್ರಕ್ಕೆ ಕೊಡುಗೆ ನೀಡಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.1: ನಕಾರಾತ್ಮಕ ಯೋಚನೆಗಳೇ ಜೀವನದ ಬಹುದೊಡ್ಡ ಶತ್ರುಗಳಾಗಿದ್ದು, ವಿದ್ಯಾರ್ಥಿಗಳು ಇವುಗಳ ಮೇಲೆ ಜಯಗಳಿಸಬೇಕು. ದುರಾಲೋಚನೆಯ ವಿರುದ್ಧ ಸದಾ ಹೋರಾಡಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಲೆಕ್ಚರ್ ಕಾಲೋನಿಯ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ಅಂತರ ಶಾಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಒಂದು ರಾಜ್ಯದಲ್ಲಿ ರಾಜನಿಗೆ ಮಾತ್ರ ಗೌರವ ಇರುತ್ತದೆ. ಆದರೆ ಜ್ಞಾನಿಗೆ ಇಡೀ ಜಗತ್ತು ತಲೆಬಾಗುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಸದಾ ಒಳಿತನ್ನು ಯೋಚಿಸಬೇಕು. ಯಶಸ್ವಿ ಜೀವನಕ್ಕೆ ಯಾವುದೇ ಅಡ್ಡ ಮಾರ್ಗವಿಲ್ಲ ಎನ್ನುವುದನ್ನು ತಿಳಿದು ಕೊಂಡು ಉತ್ತಮ ಶಿಕ್ಷಣ, ಸಂಸ್ಕಾರ ಪಡೆದು ಜ್ಞಾನವಂತರಾಗಿ ರಾಜ್ಯ, ರಾಷ್ಟ್ರವನ್ನು ಬೆಳಗಿಸುವ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಖಡಕೇಶ್ವರ ವಿದ್ಯಾ ಸಂಸ್ಥೆಯ ಕೋಶಾಧ್ಯಕ್ಷ ಪ್ರಭುರಾವ ಧೂಪೆ ಮಾತನಾಡಿ, ವಿದ್ಯಾರ್ಥಿಗಳು ಕಲಿತ ವಿದ್ಯೆಯನ್ನು ಸಮಾಜವನ್ನು ಬೆಳಗಿಸಲು ಉಪಯೋಗಿಸಬೇಕು ಎಂದು ತಿಳಿಸಿದರು. ಸಂಸ್ಥೆಯ ನಿರ್ದೇಶಕ ಅಶೋಕ ಲೋಖಂಡೆ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಶಿಕ್ಷಣ, ಸಂಸ್ಕಾರ ಪಡೆದು ರಾಷ್ಟ್ರದ ಪ್ರಗತಿಗೆ ತಮ್ಮ ಕೊಡುಗೆ ನೀಡಬೇಕು ಎಂದು ಆಶಿಸಿದರು.

ಖಡಕೇಶ್ವರ ಶಾಲೆಯ ಮುಖ್ಯಗುರು ಶಿವಲಿಂಗ ಕುಂಬಾರ ಮಾತನಾಡಿ, ಜ್ಞಾನಕ್ಕಿಂತ ದೊಡ್ಡ ಶಕ್ತಿ ಮತ್ತೊಂದಿಲ್ಲ, ವಿದ್ಯಾರ್ಥಿಗಳನ್ನು ಜ್ಞಾನವಂತರನ್ನಾಗಿಸಲು ಶಿಕ್ಷಕರು ಸದಾಕಾಲ ಶ್ರಮಿಸುತ್ತಿದ್ದಾರೆ.

ಐದು ಶಾಲೆಗಳು ಭಾಗಿ

ಯುವ ಉದ್ಯಮಿ ಗಿರೀಶ ಕುಡತೆ ಪ್ರಾಯೋಜಕತ್ವದಲ್ಲಿ ಏರ್ಪಡಿಸಿದ್ದ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ, ಖಡಕೇಶ್ವರ ಪ್ರೌಢ ಶಾಲೆ ಭಾಲ್ಕಿ, ನಿರ್ಮಲಾ ಹಲ್ಮಂಡಗೆ ಶಾಲೆ ಭಾಲ್ಕಿ, ಸದ್ಗುರು ವಿದ್ಯಾಲಯ ಭಾಲ್ಕಿ ಮತ್ತು ಶಿವಯೋಗಿಶ್ವರ ಪ್ರೌಢ ಶಾಲೆ ಭಾತಂಬ್ರಾ ಸೇರಿ ಐದು ಶಾಲೆಯ ತಲಾ ವಿದ್ಯಾರ್ಥಿಗಳು ಭಾಗವಹಿಸಿದರು.

ವಿದ್ಯಾರ್ಥಿಗಳ ಜ್ಞಾನ ವೃದ್ಧಿಗೆ ರಸಪ್ರಶ್ನೆ ಸ್ಪರ್ಧೆ ಪೂರಕವಾಗಿವೆ. ಇಂತಹ ಸ್ಪರ್ಧೆಗಳು ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವುದರ ಜತೆಗೆ ಸಾಮಾನ್ಯ ಹೆಚ್ಚಿಸಲು ಸಹಾಯಕವಾಗುತ್ತವೆ.

– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವ ಬೆಳೆಸುವ ದಿಸೆಯಲ್ಲಿ ಕಳೆದ ನಾಲ್ಕು ವರ್ಷಗಳಿಂದ ನಿರಂತರವಾಗಿ ರಸಪ್ರಶ್ನೆ ಕಾರ್ಯಕ್ರಮ ಆಯೋಜಿಸಿ ಕೊಂಡು ಬರಲಾಗುತ್ತಿದೆ. ಇದು ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಕೆಗೆ ಸಹಕಾರಿ ಆಗಲಿದೆ.

– ಆನಂದ ಕಲ್ಯಾಣೆ ಮುಖ್ಯಗುರುಗಳು ಖಡಕೇಶ್ವರ ಪ್ರೌಢ ಶಾಲೆ ಭಾಲ್ಕಿ

ವಿದ್ಯಾರ್ಥಿಗಳು ಶಿಕ್ಷಕರನ್ನು ಗೌರವದಿಂದ ಕಾಣಬೇಕು ಎಂದು ತಿಳಿಸಿದರು. ಮುಖ್ಯಗುರು ಆನಂದ ಕಲ್ಯಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಸುಧೀರ ನಾಯಕ ಅಧ್ಯಕ್ಷತೆ ವಹಿಸಿದರು. ಈ ಉದ್ಯಮಿ ಗಿರೀಶ ಕುಡತೆ, ಖಡಕೇಶ್ವರ ಪ್ರೌಢ ಶಾಲೆಯ ಪ್ರಾಥಮಿಕ ಶಾಲೆಯ ಮುಖ್ಯಗುರು ರೇಖಾನಾಯಕ, ಉದಯ ಜೋಶಿ, ಶುಭಂ ರಾಯವಾಡೆ ಇದ್ದರು. ಅಂಜಲಿ ಜೋಶಿ ಸ್ವಾಗತ ಗೀತೆ ಹಾಡಿದರು. ಜಯಪ್ರಕಾಶ ಸಹಾನೆ ಸ್ವಾಗತಿಸಿದರು. ಪ್ರಕಾಶ ರುದನೂರೆ ನಿರೂಪಿಸಿದರು. ದಿಲೀಪಕುಮಾರ ಘಂಟೆ ವಂದಿಸಿದರು.

# ಬೀದರ್ ಲೋಕಸಭಾ ಕ್ಷೇತ್ರಕ್ಕೆ 50380 ಮನೆ ಮಂಜೂರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.1:ಬೀದರ್ ಲೋಕಸಭಾ ಕ್ಷೇತ್ರಕ್ಕೆ ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾಮೀಣ) ಅಡಿಯಲ್ಲಿ 2024–25ನೇ ಸಾಲಿನಲ್ಲಿ 50380 ಮನೆಗಳು ಪರಿಷ್ಕೃತ ಮನೆಗಳ ಗುರಿಯನ್ನು ನಿಗದಿಪಡಿಸಲಾಗಿದೆ. ಆದ್ಯತ್ಯಾ ಪಟ್ಟಿಯಲಲಿರುವ ಫಲಾನುಭವಿಗಳು ಫೆ.15ರೊಳಗೆ ಅಗತ್ಯ ದಾಖಲೆಗಳನ್ನು ಗ್ರಾಮ ಪಂಚಾಯತಿಗೆ ಸಲ್ಲಿಸಬೇಕು ಎಂದು ಸಂಸದ ಸಾಗರ ಖಂಡ್ರೆ ತಿಳಿಸಿದ್ದಾರೆ.

ಕ್ಷೇತ್ರದ 50380 ಪರಿಷ್ಕೃತ ಮನೆಗಳ ವರ್ಗವಾರು ಮತ್ತು ಜಾತಿವಾರು ಆದ್ಯತಾ ಪಟ್ಟಿ ಈಗಾಗಲೇ ಗ್ರಾಮ ಪಂಚಾಯಿತಿಯಲ್ಲಿ ಲಭ್ಯವಿದ್ದು, ಇದನ್ನು ಖಾತ್ರಿಪಡಿಸಿಕೊಂಡು ಫಲಾನುಭವಿಗಳು ತಮ್ಮ ಬ್ಯಾಂಕ್ ಖಾತೆ ಸಂಖ್ಯೆ, ಆಧಾರ ಸಂಖ್ಯೆ, ಪಡಿತರ ಚೀಟಿ ಹಾಗೂ ಇತರೆ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತಿ ಕಚೇರಿಗೆ ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಅದರಂತೆ ಪಿಡಿಓ ಮತ್ತು ಡಿಇಓ ರವರು ಸಂಬಂಧಿಸಿದ ಅರ್ಹ ಫಲಾನುಭವಿಗಳ ಮನೆಗೆ ಭೇಟಿ ನೀಡಿ ಆಧಾರ ಕಾರ್ಡ, ಬ್ಯಾಂಕ್ ಪಾಸ್‌ಬುಕ್, ಮೊಬೈಲ್ ಸಂಖ್ಯೆಗಳನ್ನು ಪಡೆದು ನೊಂದಾಯಿಸಿಕೊಳ್ಳಳು ಕ್ರಮ ಕೈಗೊಂಡು ನಂತರ ಜಿಯೋಟ್ಯಾಗ್ ಮಾಡಿ ಫೋಟೊಗಳನ್ನು ಕಡ್ಡಾಯವಾಗಿ ತಂತ್ರಾಂಶದಲ್ಲಿ ಅಪಲೋಡ್ ಮಾಡಿ ಫೆ.15ರೊಳಗೆ ಜಿಲ್ಲಾ ಪಂಚಾಯಿತಿಯಿಂದ ಅನಮೋದನೆ ಪಡೆಯಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಒಂದು ಘಟಕಕ್ಕೆ ಸಾಮಾನ್ಯ/ಅಲ್ಪಸಂಖ್ಯಾತರ ವರ್ಗದವರಿಗೆ 1.20 ಲಕ್ಷ ಹಾಗೂ ಎಸ್.ಸಿ ಮತ್ತು ಎಸ್.ಟಿ ವರ್ಗದವರಿಗೆ 1.75 ಲಕ್ಷ ರೂ.ಗಳು ಮಂಜೂರಾಗುತ್ತದೆ. ನನ್ನ ಲೋಕಸಭಾ ಕ್ಷೇತ್ರವನ್ನು ಹಂತ–ಹಂತವಾಗಿ ಗುಡಿಸಲು ಮುಕ್ತ ಮಾಡುವ ಗುರಿ ಹೊಂದಿದ್ದೇನೆ.

ಈ ಸಂಬಂಧ ಫಲಾನುಭವಿಗಳಿಂದ ಏನೇ ದೂರಗಳು ಮತ್ತು ಆಕ್ಷೇಪಣೆಗಳಿದ್ದಲ್ಲಿ ಸಂಬಂಧಪಟ್ಟ ತಾಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದೂರು ಸಲ್ಲಿಸಿ ಪರಿಹಾರ ಕಂಡುಕೊಳ್ಳುವಂತೆ ತಿಳಿಸಿದ್ದಾರೆ.

# ಮಡಿವಾಳ ಮಾಚಿದೇವ ಜಯಂತಿ: ಪುಷ್ಪ ನಮನ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.1: ಕುಕನೂರ ಪಟ್ಟಣದ ಅನ್ನದಾನೇಶ್ವರ ಶಾಖಮಠದ ಸಹಯೋಗದಲ್ಲಿ ಮಡಿವಾಳ ಮಾಚಿದೇವ ಜಯಂತಿಯನ್ನು ಪುಷ್ಪ ನಮನ ಸಲ್ಲಿಸುವುದರ ಮುಖಾಂತರ ಶನಿವಾರ ಆಚರಿಸಲಾಯಿತು. ದಿವ್ಯ ಸಾನಿಧ್ಯವನ್ನು ಡಾ. ಮಹದೇವ ಮಹಾಸ್ವಾಮಿಗಳು ವಹಿಸಿದ್ದರು. ಮಡಿವಾಳ ಮಾಚಿದೇವ ಅವರ



ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಡಿವಾಳ ಮಾಚಿದೇವ ಸಮಾಜದ ಅಧ್ಯಕ್ಷರಾದ ಈಶಪ್ಪ ಮಡಿವಾಳರ , ಆನಂದ ಮಡಿವಾಳರ, ವೀರೇಶ್ ಮಡಿವಾಳರ, ವೀರಯ್ಯ ದಳಪತಿ, ಗದಿಗೆಪ್ಪ ಪವಾಡಶೆಟ್ಟಿ, ಸಂಗಮೇಶ್ ಕಲ್ಮಠ, ಹಾಗೂ ಇತರರು ಇದ್ದರು.

# ಶರಣರು ಭಕ್ತಿ ಚೆಲ್ಲಿ ಕ್ರಾಂತಿ ಮಾಡಿದವರು: ಬಸವರಾಜೇಂದ್ರ ಶರಣರು

ಮಲ್ಲಮ ನುಡಿ ವಾರ್ತೆ
ಬಳ್ಳಾರಿ,ಫೆ.01:ಮಡಿವಾಳ ಮಾಚಿದೇವರು ವಚನಗಳ ಮೂಲಕ ಸಮಾಜದ ಕೊಳಕು ತೊಳೆದು ಹಾಕಿದವರು. ಶರಣರು ರಕ್ತ ಚೆಲ್ಲಿ ಕ್ರಾಂತಿ ಮಾಡಿದವರಲ್ಲ,ಭಕ್ತಿ ಚೆಲ್ಲಿ ಕ್ರಾಂತಿ ಮಾಡಿದವರು. ಆ ಶರಣರಲ್ಲಿ ಮಡಿವಾಳ ಮಾಚಿದೇವರು ಕೂಡ ಒಬ್ಬರಾಗಿದ್ದಾರೆ ಎಂದು ಬೆಳಗಾವಿ ಜಿಲ್ಲೆಯ ಝುಂಜರವಾಡನಶ್ರೀಮಾಚಿದೇವ ಯೋಗ ಮಂದಿರ ಟ್ರಸ್ಟ್ ನ ಬಸರಾಜೇಂದ್ರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿದೊಡ್ಡನಗೌಡ ರಂಗಮದಿರದಲ್ಲಿ ಶನಿವಾರ ಏರ್ಪಡಿಸಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಮಾಚಿದೇವರು ಸಮಾಜದ ಶ್ರೇಷ್ಠವಚನಕಾರರಲ್ಲಿ ಒಬ್ಬರು. ಸರ್ವರಿಗೂ ಸಮಪಾಲು–ಸಮಬಾಳು ಒದಗಿಸಲು ಶರಣರ ಅಗ್ರಗಣ್ಯ ಬಳಗದಲ್ಲಿ ಅತ್ಯಂತ ಪ್ರಕಾಶಮಾನವಾಗಿ ಕಂಡುಬಂದವರು ಎಂದರು.

ಕ್ರಿ.ಶ 1120 ರಲ್ಲಿ ಬಿಜಾಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ದೇವರ ಹಿಪ್ಪರಗಿಯಲ್ಲಿ ತಂದೆ ಪರುವತಯ್ಯ,ತಾಯಿ ಸುಜ್ಞಾನವ್ವ



ದಂಪತಿಗಳ ಮಗನಾಗಿ ಮಡಿವಾಳ ಮಾಚಿದೇವರು ಜನಿಸಿದರು.ಶಿವಶರಣರ ಹಾಗೂ ಕಾಯಕದಲ್ಲಿ ನಿಷ್ಠೆಯುಳ್ಳ ಮೈಲಿಗೆಯ ಬಟ್ಟೆಗಳನ್ನು 'ಮಡಿ' ಮಾಡಿ ಮುಟ್ಟಿಸುವ ಕಾಯಕ ಇವರಾದಾಗಿತ್ತು ಎಂದು ವಿವರಿಸಿದರು.

12ನೇಶತಮಾನದಬಸವಣ್ಣನವರ ಸಮಕಾಲೀನ ಶರಣರಲ್ಲಿ ಮಡಿವಾಳ ಮಾಚಿದೇವರು ಒಬ್ಬರಾಗಿದ್ದರು. ಮಡಿವಾಳ ಸಮುದಾಯದ ಜನರಲ್ಲಿ ವಿಶಾಲ ಮನೋಧರ್ಮ ಇದೆ. ಎಂದು ಹೇಳಿದರು.

ಮೌಢ್ಯಗಳಿಂದ ದೀನರ ಶೋಷಣೆ ನಡೆಯುತ್ತಿದ್ದ ಕಾಲದಲ್ಲಿ ಮಾಚಿದೇವ ಜಾಗೃತಿಯ ಮೂಲಕ ಶೋಷಣೆ ತಡೆಗಟ್ಟಿದರು.12ನೇ ಶತಮಾನದ ಕಾಲದಲ್ಲಿ ಇಂತಹ ಶರಣರು ಮಹಾಪುರುಷರು ಹಾಕಿಕೊಟ್ಟ ಮಾರ್ಗದರ್ಶನ ಹಾಗೂ ವಚನಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕಬಿ.ನಾಗರಾಜ, ಜಿಲ್ಲಾ ಮಡಿವಾಳರ ಸಂಘ ಅಧ್ಯಕ್ಷ ಎನ್.ಧನಂಜಯ ಹಮಲ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಎಂ.ನಾಗಭೂಷಣ ಬಾಪುರ ತಂಡದಿಂದ ವಚನ ಗಾಯನ ಪ್ರಸ್ತುತ ಪಡಿಸಿದರು.

*ಸಂಭ್ರಮದ ಮೆರವಣಿಗೆ:*

ಮಡಿವಾಳ ಮಾಚಿದೇವ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ವಿವಿಧ ಸಾಂಸ್ಕೃತಿಕ ಕಲಾ ತಂಡಗಳನ್ನೊಳಗೊಂಡು ಸಂಭ್ರಮದಿಂದ ನಡೆಯಿತು.

ಮೆರವಣಿಗೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಮುನಿಸಿಪಲ್ ಮೈದಾನದಲ್ಲಿ ಮಹಾನಗರ ಪಾಲಿಕೆ ಮೇಯರ್ ಮುಲ್ಲಂಗಿ ನಂದೀಶ್ ಅವರು ಚಾಲನೆ ನೀಡಿಸರು.

ಮೆರವಣಿಗೆಯು ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ತೇರು ಬೀದಿ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ಕಾರಾಗೃಹದ ಬಂದಿಗಳ ಉಚಿತ ಸಂಪೂರ್ಣ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ




ಮಲ್ಲಮ ನುಡಿ ವಾರ್ತೆ
ಕಲಬುರಗಿ,ಫೆ.01:ಬೆಂಗಳೂರಿನ ಪ್ರಿಸ್‌ನರ್ ಹೋಪ್ ಮಿನಿಸ್ಟರಿ ಆಫ್ ಇಂಡಿಯಾ ಸಂಸ್ಥೆಯು ಕಲಬುರಗಿ ಕೇಂದ್ರ ಕಾರಾಗೃಹ ಬಂದಿಗಳಿಗೆಉಚಿತವಾಗಿಸಂಪೂರ್ಣ ಆರೋಗ್ಯ ತಪಾಸಣಾ ಶಿಬಿರ ಮತ್ತು ಮನಃ ಪರಿವರ್ತನೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಶನಿವಾರ ಹಮ್ಮಿಕೊಳ್ಳಲಾಯಿತು.

ಈ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಬೆಂಗಳೂರಿನ ಪ್ರಿಸ್‌ನರ್ ಹೋಪ್ ಮಿನಿಸ್ಟರಿ ಸಂಸ್ಥೆಯ ವೈದ್ಯಾಧಿಕಾರಿ ಡಾ॥ ಶ್ರೀಕಾಂತ ಎಂ.ಡಿ ಅವರು, ಪ್ರಿಸ್‌ನರ್ ಹೋಪ್ ಮಿನಿಸ್ಟರಿ ಆಫ್ ಇಂಡಿಯಾ ಸಂಸ್ಥೆಯಿಂದ ಈ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿದ್ದು, ಕಾರಾಗೃಹದ ಬಂದಿಗಳು ಶಿಬಿರದ ಲಾಭವನ್ನು ಪಡೆದುಕೊಂಡು ಉತ್ತಮ ಆರೋಗ್ಯವನ್ನು ಹೊಂದಲು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಪ್ರಿಸನರ್ ಹೋಪ್ ಮಿನಿಸ್ಟರಿ ಆಫ್ ಇಂಡಿಯಾ ಸಂಸ್ಥೆಯಡಿ ಗುರುತಿಸಿಕೊಂಡಿರುವ ಗೋಪಿ (ರೆವರೆಂಡ್) ಅವರು ಮಾತನಾಡಿ, ನಾನು ಮುಂಚೆ ಶಿಕ್ಷಾ ಬಂದಿಯಾಗಿದ್ದು, ಶಿಕ್ಷಾ ಅವಧಿಯಲ್ಲಿ ನನಗೆ ಕಾರಾಗೃಹ ಇಲಾಖೆಯು ಒಳಗಡೆ ಮನ: ಪರಿವರ್ತನೆಗೆ ಸಾಕಷ್ಟು ಅವಕಾಶಗಳು ಒದಗಿಸಿ ಕೊಟ್ಟಿದ್ದ–ರಿಂದ ಒಳ್ಳೆಯ ವ್ಯಕ್ತಿಯಾಗಿ ಹೊರಬಂದು ಈ ದಿನ ತಮ್ಮ ಮುಂದೆ ನಿಂತು ಸಮಾಜ ಮುಖಿಯಾಗಿ ಕಾಯಕವನ್ನು ನಿರ್ವಹಿಸುತ್ತಿದ್ದೇನೆ. ಈ ಕೇಂದ್ರ ಕಾರಾಗೃಹ ಇಲಾಖೆಯು ಮಾನವಿಯ ಮೌಲ್ಯಗಳನ್ನು ಬೆಳೆಸಿಕೊಳ್ಳುವಂತಹವಾತಾವರಣವನ್ನು ಕಲ್ಪಿಸಿಕೊಟ್ಟಿದ್ದು,ಈ ಕಾರಾಗೃಹದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಕಾರಾಗೃಹದಿಂದ ಬಿಡುಗಡೆ ಹೊಂದಿ ತಾವು ಕೂಡ ಒಳ್ಳೆಯ ಸಮಾಜ ಮುಖಿಯಾಗಿ ಕೆಲಸದಲ್ಲಿ ತೊಡಗಬೇಕೆಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ, ಸಂಸ್ಥೆಯ ಮುಖ್ಯಸ್ಥರಾದ ಡಾ. ಅನಿತಾ ಆರ್ ಅವರು, ಬೆಂಗಳೂರಿನ ಪ್ರಿಸ್‌ನರ್ ಹೋಪ್ ಮಿನಿಸ್ಟರಿ ಆಫ್ ಇಂಡಿಯಾ ಸಂಸ್ಥೆಯಿಂದ ಉಚಿತವಾಗಿ ಸಂಪೂರ್ಣ ಆರೋಗ್ಯ ತಪಾಸಣಾ ಶಿಬಿರ ಹಾಗೂ ಮನಃ ಪರಿವರ್ತನೆ ಅರಿವು ಕಾರ್ಯಕ್ರಮಆಯೋಜಿಸಿದ್ದಕ್ಕಾಗಿ ಇಲಾಖೆಯಿಂದ ಅಭಿನಂದನೆ ಸಲ್ಲಿಸಿ, ಈ ಸಂಸ್ಥೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗೋಪಿ, ಸುಧಾಕರ ಮತ್ತು ರವಿ ಇವರು ಮುಂಚೆ ಶಿಕ್ಷಾ ಬಂದಿಗಳಾಗಿದ್ದರು. ನಮ್ಮ ಇಲಾಖೆ ಸುಧಾರಣೆ ಕ್ರಮಗಳ ನಿಟ್ಟಿನಲ್ಲಿ ಇವರು ಒಳ್ಳೆಯತನವನ್ನು ಬೆಳೆಸಿಕೊಂಡು ಬಿಡುಗಡೆ ಹೊಂದಿ ಉತ್ತಮ ಸಮಾಜ ಮುಖಿ ಕಾರ್ಯವನ್ನು ಈ ಸಂಸ್ಥೆಯಡಿ ಬಂದಿಗಳಿಗೆ ಉಚಿತವಾಗಿ ಆರೋಗ್ಯ ಶಿಬಿರ ಹಾಗೂ ಮನಃ ಪರಿವರ್ತನೆ ಅರಿವು ಕಾರ್ಯಕ್ರಮಗಳನ್ನು ನಿರಂತರವಾಗಿಆಯೋಜಿಸುತ್ತಿದ್ದಾರೆ ಎಂದರು.

ಈ ಶಿಬಿರದಲ್ಲಿ ಒಟ್ಟು 120 ಬಂದಿಗಳನ್ನು ಚರ್ಮ, ಮದುಮೇಹ, ಬಿ.ಪಿ, ಶೀತ, ಜ್ವರ ಇನ್ನಿತರೆ ಕಾಯಿಲೆಗಳ ಸಂಪೂರ್ಣ ತಪಾಸಣೆ ಮಾಡಿ ಉಚಿತವಾಗಿ ಔಷಧಿಯನ್ನು ವಿತರಿಸಲಾಯಿತು.ಕಾರ್ಯಕ್ರಮದಲ್ಲಿ ಬೆಂಗಳೂರಿನ ಪ್ರಿಸ್‌ನರ್ ಹೋಪ್ ಮಿನಿಸ್ಟರಿ ಆಫ್ ಇಂಡಿಯಾ ಸಂಸ್ಥೆಯಿಂದ ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯಸ್ಥೆ ಡಾ.ಅನಿತಾ ಅವರಿಗೆ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ. ಅರ್ಚನಾ, ಸಹಾಯಕ ಅಧೀಕ್ಷಕ ಚನ್ನಪ್ಪ, ಜೈಲರ್‌ಗಳಾದ ಸುನಂದ ವಿ., ಸಾಗರ ಪಾಟೀಲ, ಶ್ರೀಮಂತಗೌಡ ಪಾಟೀಲ, ಮಹಾದೇವಿ ಹಾಗೂ ಜೋಸೆಫ್, ಜೀವನ ಪ್ರಕಾಶ ಶಾಲೆಯ ಕಾರ್ಯದರ್ಶಿ ರವಿ ಕಾರ್ಯದರ್ಶಿ, ಸುಧಾಕರ (ರವೆರೆಂಡ್) ಅನಿತಾ, ಲತಾ, ಸದಸ್ಯರು ಹಾಗೂ ತಂಡದಲ್ಲಿ ಪಾಲ್ಗೊಂಡಿದ್ದರು.

ಈ ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ ಡಾಂಗೆ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಶಿಕ್ಷಕ ನಾಗರಾಜ ಮುಲಗೆ ಕಾರ್ಯಕ್ರಮನೆರವೇರಿಸಿಕೊಟ್ಟರು. ಸಂಸ್ಥೆಯ ಶಿಕ್ಷಾ ಬಂದಿಯಾದ ವೀರೇಶ್ ಪ್ರಾರ್ಥನಾ ಗೀತೆ ಹಾಡಿದರು.

# ಆತ್ಮ ನಿರ್ಭರ ಭಾರತಕ್ಕೆ ಒತ್ತು ನೀಡಿದ ಬಜೆಟ್:ಕು.ಲಲಿತಾ ಅನಪುರ


ಮಲ್ಲಮ್ಮ ನುಡಿ ವಾರ್ತೆ
:ಫೆ.1:ಇಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಮಂಡಿಸಿರುವ ಬಜೆಟ್ ಬಡವರು, ಮಧ್ಯಮ ವರ್ಗದವರಿಗೆ ಅತಿ ಹೆಚ್ಚಿನ ಅನುಕೂಲತೆಗಳನ್ನು ಮಾಡಿಕೊಟ್ಟಿರುವ ಈ ಬಜೆಟ್ ರಾಷ್ಟದ ಜನತೆಗೆ ಖುಷಿ ತಂದಿದೆ. ಪರಿಶಿಷ್ಟ ಜಾತಿ ವರ್ಗಗಳಿಗೆ,



ಕಾರ್ಖಾನೆ, ಸ್ಟಾರ್ಟಪ್‌ಗಳನ್ನು ಮಾಡುವವರಿಗೆ 20,000 ಕೋಟಿ ರೂ. ಸಾಲವಾಗಿ ಕೊಡುವ, ಅನುದಾನ ಕೊಡುವ ಪ್ರಸ್ತಾವ ಸ್ವಾಗತಾರ್ಹ. ಹಿಂದೆಂದೂ ಇಲ್ಲದಂತಹ ಈ ಪ್ರಸ್ತಾವದಿಂದ ಪರಿಶಿಷ್ಟ ಜಾತಿ ವರ್ಗದವರಿಗೆ, ವಿಶೇಷವಾಗಿ ಯುವಕರಿಗೆ ಬಹಳ ಅನುಕೂಲ ಆಗಿದೆ ಎಂದು ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ ಹೇಳಿದರು.

# ನಿರಾಶಾದಾಯಕ ಬಜೆಟ್

ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ:ಫೆ.1: ಕೇಂದ್ರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಮಂಡಿಸಿದ 2025–26ನೇ ಸಾಲಿನ ಕೇಂದ್ರ ಅಯ್ಯವ್ಯಯದಲ್ಲಿ ಬಿಹಾರ ಚುನಾವಣೆಯ ಪ್ರಣಾಳಿಕೆಯಂತಾಗಿದ್ದು ಕರ್ನಾಟಕವನ್ನು ಸಂಪೂರ್ಣ ಕಡೆಗಣಿಸಲಾಗಿದೆ. ರಾಜ್ಯಕ್ಕೆ ಯಾವುದೇ ಹೊಸ ಯೋಜನೆಯನ್ನು ಅಳಡಿಸಿಕೊಂಡಿಲ್ಲ ಇದರಿಂದ ಕನ್ನಡಿಗರ ನಿರೀಕ್ಷೆಗಳು ಹುಸಿಯಾಗಿವೆ ಎಂದು ಕಾಂಗ್ರೆಸ್ ಶಾಸಕ ಚೆನ್ನಾರಡ್ಡಿ ಪಾಟೀಲ್ ತುನ್ನೂರು ಅವರು ಪ್ರತಿಕ್ರಿಯಿಸಿದ್ದಾರೆ.



ಹಿಂದುಳಿದ ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳ ಅಭಿವೃದ್ಧಿಗೆ 5 ಸಾವಿರ ಕೋಟಿ ರುಪಾಯಿಗಳನ್ನು ಹಂಚಿಕೆ ಮಾಡುವಂತೆ ಎಐಸಿಸಿ ವರಿಷ್ಠರಾದ ಮಲ್ಲಕಾರ್ಜುನ ಖರ್ಗೆ ಅವರು ಹಣಕಾಸು ಸಚಿವರಿಗೆ ಮನವಿ ಮಾಡಿದ್ದರು. ಆದರೆ ಇದ–ಕ್ಕೆ ಸ್ಪಂಧಿಸದೆ ಹಿಂದುಳಿದ ಭಾಗವನ್ನು ಕಡೆಗಣಿಸಿದೆ ಎಂದು ತುನ್ನೂರು ಕಿಡಿ ಕಾರಿದ್ದಾರೆ.

ಕಿಸಾನ್ ಕ್ರೆಡಿಟ್ ಕಾರ್ಡ್ ಹೊಂದಿದವರಿಗೆ ಕಿಸಾನ್ ಕ್ರೆಡಿಟ್ ಹೊಂದಿದವರಿಗೆ 3.50 ಲಕ್ಷ ವರೆಗೆ ಸಾಲ ಸೌಲಭ್ಯವನ್ನು ಒದಗಿಸುವುದಾಗಿ ಘೋಷಿಸಲಾಗಿದೆ. ಆದರೆ, ರೈತರ ಉತ್ಪಾದನೆಗೆ ಯಾವುದೇ ನಿರ್ಧಿಷ್ಟವಾದ ಯೋಜನೆಯನ್ನು ರೂಪಿಸದೇ ಇರುವುದರಿಂದ ರೈತರು ಸಾಲದ ಸುಳಿಯಲ್ಲಿ ಇರಬೇಕಾಗತ್ತದೆ.ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ.ಬಜೆಟ್ ಕೇವಲ ರೈತರ ಗುಣಗಾನಕ್ಕೆ ಸೀಮತಿವಾಗಿದ್ದು ಕೃಷಿ ಕ್ಷೇತ್ರದ ಕಣ್ಣಿಗೆ ಮಣ್ಣೆರಚುವ ಕಾರ್ಯವಾಗಿದೆ.ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಮಾಡುವ ಬಗ್ಗೆ, ಕೃಷಿ ಸಾಲ ನೀತಿ ತಿದ್ದುಪಡಿ ಮಾಡುವ ಕುರಿತು ಯಾವುದೇ ಪ್ರಸ್ತಾಪ ಮಾಡಿಲ್ಲ. ಕೃಷಿ ಕ್ಷೇತ್ರ–ಕ್ಕೆ ನಿರುಪಯೋಗಿ ಬಜೆಟ್ ಇದಾಗಿದೆ.

ಗ್ರಾಮೀಣ ಪ್ರದೇಶದ ಮೂಲ ಶಿಕ್ಷಣಕ್ಕೆ ಒತ್ತು ಕೊಟ್ಟಿಲ್ಲ. ಮಹಿಳಾ ಶಿಕ್ಷಣಕ್ಕೆ ಯಾವದೇ ಹೊಸ ಯೋಜನೆಯನ್ನು ರೂಪಿಸಿಲ್ಲ. ಇದರಿಂದ ಮಹಿಳಾ ಸಬಲೀಕರಣಕ್ಕೆ ಪ್ರಾತಿನಿದ್ಯ ನೀಡಿಲ್ಲ. ಬಡವರಿಗೆ ಮತ್ತು ಮಧ್ಯಮ ವರ್ಗದವರಿಗೆ ಆದಾಯ ಮೂಲ ಹೆಚ್ಚಿಸಲು ಸರಿಯಾದ ಯೋಜನೆಗಳು ರೂಪಿಸದಂತೆಯೂ ಕಾಣುತ್ತಿಲ್ಲ ಇದರಿಂದ ಬಡವರು ಬಡವರಾಗಿ ಉಳಿಯುತ್ತಾರೆ. ದೇಶದ ಸಾಲ 200 ಲಕ್ಷ ಕೋಟಿಗಿಂತಲೂ ಹೆಚ್ಚಾಗಿರುವುದು ದೇಶದ ಪ್ರತಿ ಪ್ರಜೆಗೂ ಆತಂಕವನ್ನು ಹುಟ್ಟಿಸಿದೆ. ಒಟ್ಟಾರೆ ಬಜೆಟ್‌ನಲ್ಲಿ ಎನ್‌ಡಿಎ ಯೇತರ ರಾಜ್ಯಗಳಿಗೆ ಘೋರ ಅನ್ಯಾಯ ಮಾಡಲಾಗಿದ್ದು ಕರ್ನಾಟಕದ ಪಾಲಿಗೆ ಬಜೆಟ್ ನೀರಸವಾಗಿದೆ ಎಂದು ಟೀಕಿಸಿದ್ದಾರೆ.

ಎನ್‌ಡಿಎ ಆಡಳಿತದ 11 ವರ್ಷಗಳಲ್ಲಿ ಹಿಂದೆಂದ ಕಂಡ ಕೇಳರಿಯದಷ್ಟು ನಿರುದ್ಯೋಗ ಸಮಸ್ಯೆ ಉಲ್ಭಣಿಸಿದೆ. ಈ ಬಜೆಟ್‌ನಲ್ಲಿ ಕೂಡ ದುಡಿಯುವ ಯುವಕರ ಕೈಗೆ ಉದ್ಯೋಗ ನೀಡುವ ಯೋಜನೆ ರೂಪಿಸದಿರುವುದು ದುರ್ದೈವದ ಸಂಗತಿ.

# ಕೊಲೆ ಪ್ರಕರಣಕ್ಕೆ ಅನ್ಯೈತಿಕ ಸಂಬಂಧವೇ ಕಾರಣ : ಡಿಎಸ್‌ಪಿ ಇನಾಂದಾರ

ಹುಣಸಗಿ:ಫೆ.1: ಪಟ್ಟಣದಲ್ಲಿ ಜನವರಿ 26ರಂದು ನಡೆದ ಕೊಲೆ ಪ್ರಕರಣಕ್ಕೆ ಅನ್ಯೈತಿಕ ಸಂಬಂಧವೇಮುಖ್ಯಕಾರಣವಾಗಿದೆ ಎಂದು ಸುರಪೂರ ಠಾಣೆಯ ಉಪ ಅಧೀಕ್ಷರಾದ ಜಾವೀದ್ ಇನಾಂದಾರ ತಿಳಿಸಿದ್ದಾರೆ.

ಗುರುವಾರಸಾಯಂಕಾಲಹುಣಸಗಿ ಸಿಪಿಐ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು,ಜನವರಿ 26ರಂದು ಬೆಳಗಿನ ಜಾವ ಪಟ್ಟಣದಲ್ಲಿ ನಡೆದ ಕೊಲೆ ಪ್ರಕರಣದಲ್ಲಿ ಮುಖ್ಯವಾಗಿ ತನ್ನ ಅನ್ಯೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದಎನ್ನುವಉದ್ದೇಶದಿಂದ ಪತ್ನಿಯೆ ಪತಿಯನ್ನು ತನ್ನ ಪ್ರಿಯಕರನೊಂದಿಗೆ ಸೇರಿ–ಕೊಂಡು ಕೊಲೆ ಮಾಡಿದ್ದಾಳೆ.

ಪಟ್ಟಣದಮಾನಪ್ಪತಂದೆರಂಗಪ್ಪ ಬುಂಕಲದೊಡ್ಡಿ ಇತನ ಹೆಂಡತಿ ಎ1 ಆರೋಪಿ ಲಕ್ಷ್ಮಿ ಇವಳು ಎ2 ಆರೋಪಿ ಮಹ್ಮದಹಕೀಬ ತಂದೆ ಮೈನುದ್ದಿನ್ ಶಿವಣಗಿ ಎಂಬುವವನ ಜೊತೆ ಸುಮಾರು ಒಂದು ವರ್ಷಗಳಿಂದ ಅನ್ಯೈತಿಕ ಸಂಬಂಧ ಹೊಂದಿದ್ದಳು. ಈ ವಿಷಯ ಗಂಡ ಮಾನಪ್ಪನಿಗೆ ತಿಳಿದ ಮೇಲೆ ಅವರ ಸಂಬಂಧಕ್ಕೆ ಗಂಡ ಅಡ್ಡಿಯಾಗಿದ್ದ, ಮಹ್ಮದಹಕೀಬ ಪೈನಾನ್ಸ್



ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದು, ಲಕ್ಷ್ಮಿಗೆ ಸುಮಾರು 10 ಲಕ್ಷ ಹಣವನ್ನು ವಿವಿಧ ಬ್ಯಾಂಕ ಹಾಗೂ ಪೈನಾನ್ಸ್‌ಗಳಲ್ಲಿ ಸಾಲ ತಗೆದುಕೊಂಡು ಆ ಸಾಲಕ್ಕೆ ಗಂಡ ಮಾನಪ್ಪನನ್ನು ನಾಮಿನಿ ಮಾಡಿದ್ದಳು. ಕೆಲವೊಂದು ಪೈನಾನ್ಸ್‌ಗಳಲ್ಲಿ ನಾಮಿನಿ ಕೊಟ್ಟವರು ಮೃತರಾದರೆ ಆ ಸಾಲ ಮನ್ನಾ ಅಗುತ್ತದೆ ಎಂಬ ಮಾಹಿತಿಯನ್ನು ಪ್ರಿಯಕರನೊಂದಿಗೆ ಪಡೆದು–ಕೊಂಡು. ಲಕ್ಷ್ಮಿ ಹಾಗೂ ಮಹ್ಮದಹಕೀಬ ಇಬ್ಬರು ಸೇರಿಕೊಂಡು ತಮ್ಮ ಪ್ರೀತಿಗೆ ಅಡ್ಡವಾಗಿರುವ ಮಾನಪ್ಪನನ್ನು ಕೊಲೆ ಮಾಡಿದರೆ, ತಾವು ನೆಮ್ಮದಿಯಿಂದ ಇರಬಹುದು ಹಾಗೂ ಸಾಲ ಕೂಡ ಮನ್ನಾ ಆಗುತ್ತದೆ ಎಂಬ ದುರುದ್ದೇಶವನ್ನು ಇಟ್ಟುಕೊಂಡು ಪ್ರಿಯಕರನ ಸಹಾಯದಿಂದ ಜನವರಿ 25 ಶನಿವಾರದಂದು ರಾತ್ರಿ ಗಂಡನಿಗೆ ಊಟದಲ್ಲಿ ನಿದ್ದೆ ಗುಳಿಗೆ ಹಾಕಿ ಮಲಗಿಸಿ, ರಾತ್ರಿ ಪ್ರಿಯಕರನನ್ನು ಮನೆಗೆ ಕರೆಸಿಕೊಂಡು ಕೊಲೆ ಮಾಡಲಾಗಿದೆ. ಕೊಲೆ ನಂತರ ಎ2 ಆರೋಪಿ ಮಹ್ಮದಹಕೀಬ ಮೃತನ ಬಟ್ಟೆಯನ್ನು ಕೆಳೆದು ಪಟ್ಟಣದ ಹೊರವಲಯದ ಕಾಲುವೆಗೆ ಎಸೆದು ಪರಾರಿಯಾಗಿದ್ದಾನೆ. ಮೃತನ ಪತ್ನಿ ಲಕ್ಷ್ಮಿ ಮುಂಜಾನೆ ಜನರನ್ನು ಮರಳು ಮಾಡಲು ನನ್ನ ಗಂಡನಿಗೆ ಹೃದಯಾಘಾತವಾಗಿದೆ ಎಂದು ನಾಟಕವಾಡಿದ್ದಾಳೆ.

ಮೃತರ ಕುಟುಂಬಸ್ಥರು ಮೃತ ದೇಹದ ಮೇಲಾಗಿರುವ ಗಾಯಗಳನ್ನು ಗಮನಿಸಿ, ಪೋಲಿಸ್ ಠಾಣೆಗೆ ದೂರು ನೀಡಿದ್ದಾರೆ.

ಹುಣಸಗಿ ಠಾಣೆ ಗುನ್ನೆ ನಂ.19/2025ಕಲಂ.103ಸಂಗಡ 3(5)ಬಿಎನ್‌ಎಸ್–2023 & ಕಲಂ.3(2)(ವಿ)ಎಸ್‌ಸಿ/ಎಸ್‌ಟಿ ಪಿಎ ???ಕ್ಟ್ 1989 ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು,ನಮ್ಮ ಸಿಬ್ಬಂದಿಗಳು 24ಗಂಟೆಯಲ್ಲಿ ಆರೋಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸಿಲಾಗಿದೆ ಎಂದು ಪತ್ರಿಕಾಗೊಷ್ಠಿಯಲ್ಲಿ ತಿಳಿಸಿದರು.

ಪ್ರಕರಣವನ್ನು ತಗೆದುಕೊಂಡ ಪೊಲಿಸ್ ಇಲಾಖೆಯು ಯಾದಗಿರಿ ಎಸ್‌ಪಿ ಪೃಥ್ವಿಕ್ ಶಂಕರ, ಅಪರ ಎಸ್‌ಪಿ ಧರಣೇಶ ಅವರ ಮಾರ್ಗದರ್ಶನದಲ್ಲಿ ಸುರಪೂರ ಉಪ ಅಧೀಕ್ಷಕರಾದ ಜಾವೀದ್ ಇನಾಂದಾರ ಇವರ ನೇತೃತ್ವದಲ್ಲಿ ಕಾರ್ಯಾಚರಣೆ ಮಾಡಿ 24 ಗಂಟೆಯಲ್ಲಿ ಆರೋಪಿಗಳನ್ನು ಪತ್ತೆ ಮಾಡಿದ ಹುಣಸಗಿ ಸಿಪಿಐ ಸಚಿನ ಚಲವಾದಿ, ಪಿಎಸ್‌ಐ ಚಂದ್ರಶೇಖರ ನಾರಾಯಣಪೂರ ಹಾಗೂ ಸಿಬ್ಬಂದಿಗಳಾದ ಬಸವರಾಜ ಹೆಚ್‌ಸಿ, ಶಿವರಾಜ ಹೆಚ್‌ಸಿ, ಲಿಂಗಪ್ಪಪಿಸಿ,ಶ್ರೀಶೈಲ್ ಎಎಸ್‌ಐ, ನಾಗರಾಜ ಹೆಚ್‌ಸಿ,ಮಡಿವಾಳಪ್ಪ ಎಎಸ್‌ಐ, ಹಣಮಂತ್ರಾಯ ಪಿಸಿ, ದ್ಯಾಮಣ್ಣ ಪಿಸಿ, ವಾಹನ ಚಾಲಕ ಮಾಂತೇಶ ಎಹೆಚ್‌ಸಿ, ಶಿವು ಎಹೆಚ್‌ಸಿ, ಸಂತೋಷ ಎಹೆಚ್‌ಸಿ ಇವರ ಕಾರ್ಯವನ್ನು ಶ್ಲಾಘನೆ ಮಾಡಿದ ಜಿಲ್ಲಾ ಪೊಲೀಸ್ ಅಧೀಕ್ಷಕರು ಬಹುಮಾನ ಘೋಷಣೆ ಮಾಡಿದ್ದಾರೆ.

ಪೊಲೀಸ್ ಇಲಾಖೆಯ ಈ ಸಾಧನೆಗೆ ಪಟ್ಟಣದ ಮುಖಂಡರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ವೀರಗನಾಚಾರ ಶರಣ ಶ್ರೀ ಮಡಿವಾಳ ಮಾಚಿದೇವರ ದಿನಾಚರಣೆ"

ಮಲ್ಲಮ್ಮ ನುಡಿ ವಾರ್ತೆ
ಕೊಡೇಕಲ್ಲ:ಫೆ.1:ಜನಕ ಕಲಾ ಪದವಿ ಮಹಾವಿದ್ಯಾಲಯ ಕೊಡೇಕಲ್ ಆವರಣದಲ್ಲಿ ಎನ್ ಎಸ್ ಎಸ್ ಘಟಕದ ವತಿಯಿಂದ 12ನೇ ಶತಮಾನದಲ್ಲಿ ಬಡ ಹಾಗೂ ಕೆಳ ವರ್ಗದ ಜನರು ಜಾತೀಯತೆ,ಅಸ್ಪಶ್ಯತೆ,ದುರ್ಬಲರ ಶೋಷಣೆ, ಮೂಢನಂಬಿಕೆ ಹಾಗೂ ಶಿಕ್ಷಣದಲ್ಲಿ ಅವಕಾಶ ಸಿಗದೆ ಅಸಮಾನತೆ ಯಿಂದ ತುಳಿತಕ್ಕೆ ಒಳಗಾಗಿದ್ದರು. ಸಮಾಜದಲ್ಲಿ ಅಸಮಾನತೆ ತೊಲಗಿಸಲು ಶರಣರು ಸಾಮಾಜಿಕ ಕ್ರಾಂತಿಯನ್ನೇ ಕೈಗೊಂಡರು. ಇವರಲ್ಲಿ ಮಡಿವಾಳ ಮಾಚಿದೇವರು ಅಗ್ರಗಣ್ಯ ಸ್ಥಾನದಲ್ಲಿ ಒಬ್ಬರೆನಿಸಿದ್ದಾರೆ.



ಇವರು ಕಾಯಕ ನಿಷ್ಠೆಗೆ ಹೆಚ್ಚಿನ ಒತ್ತು ನೀಡಿದ್ದರು. ಶೋಷಿತ ವರ್ಗದ ಏಳಿಗೆಗೆ ಶ್ರಮಿಸಿದ್ದರು. ಇವರು ರಚಿಸಿದ ವಚನಗಳು ಉತ್ತಮ ಸಮಾಜಕ್ಕೆ ದಾರಿದೀಪ ವಾಗಿವೆ. ಈ ದಿಸೆಯಲ್ಲಿ ಸಮುದಾಯದ ಜನರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವುದರ ಜತೆಗೆ ಸಂಘಟಿತರಾಗಬೇಕಿದೆ. ಆಗ ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಪ್ರಾಚಾರ್ಯರು ಸೋಮಶೇಖರ ಪಂಜಗಲ ಮಾತನಾಡಿದರು

ಇದೆ ಸಂದರ್ಭದಲ್ಲಿ ನಾಗರಾಜ ಪಾಟೀಲ , ಸುವರ್ಣ ಹೊಸಗೌಡರ್, ಸುಜಾತಾ ವಂಗಿ,ಕು.ಸಂಗೀತಾ ದೊರಿಗೋಳ

ಶ್ರೀಮತಿ ಕಾವೇರಿ ಆದಿ ಉಪಸ್ಥಿತರಿದ್ದರು.

# ಮೂರನೇ ರ್‍ಯಾಂಕ್ ಪಡೆದ ಸರಗಮ್ ಜಿತೇಂದ್ರಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ:–ನಗರದ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಅಕ್ಕಮಹಾದೇವಿ ಮಹಿಳಾ ಪದವಿ ಕಾಲೇಜು ವಿದ್ಯಾರ್ಥಿನಿ ಸರಗಮ್ ಜಿತೇಂದ್ರ ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆಕಲಾವಿಭಾಗದಲ್ಲಿ ಮೂರನೇರ್‍ಯಾಂಕ್ ಪಡೆದು ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಅವರನ್ನುಸಂಸ್ಥೆಯವತಿಯಿಂದ ಇತ್ತೀಚೆಗೆ ಸನ್ಮಾನಿಸಲಾಯಿತು.

ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ, ಬಿಡಿವಿಸಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ಶ್ರೀಕಾಂತ ಬಡದಾಳೆ, ಸಹಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣಾ ಹಲಶೆಟ್ಟಿ, ಮಲ್ಲಯ್ಯ ಸ್ವಾಮಿ ಹಿರೇಮಠ, ಅಶೋಕನಾಗರಾಳೆ, ಕಾಶಪ್ಪಾ ಸಕ್ಕರಭಾವಿ, ಜಗನ್ನಾಥ ಖೂಬಾ, ಭದ್ರಿನಾಥ ಪಾಟೀಲ, ಅನಿಲಕುಮಾರ ರಗಟೆ, ರೇವಣಪ್ಪಾ ರಾಯವಾಡೆ, ಬಿಡಿವಿಸಿ ಉಪಾಧ್ಯಕ್ಷ ಡಾ. ಜಿ.ಎಸ್. ಭುರಾಳೆ, ಕೋಶಾಧ್ಯಕ್ಷ ಶಿವರಾಜ ಶಾಶಟ್ಟೆ, ವಿಶ್ವಸ್ಥ ಸಮಿತಿ ಸದಸ್ಯರಾದ ಗದಗೆಪ್ಪಾ ಹಲಶೆಟ್ಟೆ, ಬಸವರಾಜ ಪಾಟೀಲ, ಸೋಮಶೇಖರವಸ್ತ್ರದ, ಮಲ್ಲಿನಾಥ ಮಂತಾಳೆ, ಆಡಳಿತಾಧಿಕಾರಿ ಡಾ ಮಲ್ಲಿಕಾರ್ಜುನ ಲಕಶೆಟ್ಟಿ, ಪ್ರಾಚಾರ್ಯೆ ಮಾಯಾ ಮುರಾಳೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಪ್ರಗತಿಯನ್ನು ತಂದೆ ತಾಯಿಯಷ್ಟೆ ಗುರುಗಳು ಹೆಮ್ಮೆ ಪಡುತ್ತಾರೆ:ಹುಡುಗೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ವಿದ್ಯಾರ್ಜನೆ ಕಾಲದ ಜೀವನಾನುಭವಗಳನ್ನು ಭವಿಷ್ಯದ ಬದುಕಿಗೆ ಸಾರ್ಥಕವಾಗಿ ಕಟ್ಟಿಕೊಳ್ಳುವ ಮೂಲಕ ಬದುಕನ್ನು ಬಂಗಾರ ಮಾಡಿಕೊಳ್ಳುವ ದೃಢತೆ ವಿದ್ಯಾರ್ಥಿ ಜೀವನದಲ್ಲಿಯೇ ಗಟ್ಟಿಗೊಳ್ಳಬೇಕು ಎಂದು ಚೆನ್ನಗಿರಿ ಕ್ಷೇತ್ರದ ಸಮನ್ವಯ ಅಧಿಕಾರಿ ಶಂಕರೆಪ್ಪ ಎಸ್. ತಿಳಿಸಿದರು. ಶನಿವಾರ ತಾಲೂಕಿನ ಮುತ್ತಂಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ 1999 ರಿಂದ 2002 ಸಾಲಿನ 10ನೇ ತರಗತಿ ಹಳೆಯ ವಿದ್ಯಾರ್ಥಿಗಳ ಸಂಘ ಏರ್ಪಡಿಸಿದ ಗುರುವಂದನೆ ಹಾಗೂ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾಯಿ ವಿದ್ಯಾದಾನ ಮಾಡಿದ ಗುರು ವಿದ್ಯಾ ಸಂಸ್ಥೆಗಳನ್ನು ಗೌರವಿಸಬೇಕು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಹಾಗೂ ಶಿಕ್ಷಕರ ನಡುವಿನ ಸಂಬಂಧಗಳು ಹಳಸುತ್ತಿವೆ. ಆದರೆ ಈ ಕಾಲೇಜಿನ ಹಳೆಯ ವಿದ್ಯಾರ್ಥಿಗಳು ಗುರುಗಳನ್ನು ನೆನಪು ಮಾಡಿಕೊಂಡು ಗೌರವಿಸಿ, ಇದರ ನೆಪದಲ್ಲೇ ಹತ್ತಿಪ್ಪತ್ತು ವರ್ಷಗಳ ಹಿಂದಿನಿಂದ ಇರುವ ಸಂಬಂಧಗಳನ್ನು ಜಾಗೃತಗೊಳಿಸಿಕೊಳ್ಳುವ ಈ ಕಾರ್ಯಕ್ರಮ ನಿಜಕ್ಕೂ ಅರ್ಥಪೂರ್ಣವಾದುದು ಎಂದರು. ಎಪಿಸಿ ಉಪ ನಿರ್ದೇಶಕ ಗುಂಡಪ್ಪ ಹುಡಗೆ ಮಾತನಾಡಿ, ಹಳೆಯ ವಿದ್ಯಾರ್ಥಿಗಳು ಇಂದು ಗುರುವಂದನಾ ಕಾರ್ಯಕ್ರಮ ನಡೆಸುತ್ತಿರುವುದು ತುಂಬಾ ಸಂತೋಷದ ವಿಷಯ. ಗುರುಗಳಿಂದ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ಹೋದಾಗ ಗುರುಗಳ ಬೋಧನೆ ಪರಿಶ್ರಮಕ್ಕೆ ಪ್ರತಿಫಲ ಸಿಕ್ಕಿದಂತೆ ಆಗುತ್ತದೆ ಹಾಗೂ ವಿದ್ಯಾರ್ಥಿಗಳ ಪ್ರಗತಿಯನ್ನು ಕಂಡು ತಂದೆ ತಾಯಿಯಷ್ಟೆ ಗುರುಗಳು ಹೆಮ್ಮೆ ಪಡುತ್ತಾರೆ. ವಿದ್ಯಾರ್ಥಿಗಳು ತಾವು ಕಲಿತ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕರಿಸಿ ಮುಂದಿನ ಪೀಳಿಗೆಯ ಪ್ರಗತಿಗೆ ಸಹಕಾರಿಯಾಗಬೇಕು ಎಂದರು. ಪ್ರೌಢ ಶಾಲೆ ಮುಖ್ಯ ಶಿಕ್ಷಕಿ ವಿಜಯಕಲಾ ಬುಕಾಲೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

ಶಾಲೆಯ ಹಳೆಯ ವಿದ್ಯಾರ್ಥಿಗಳು ಗುರುವಂದನೆ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮ ಏರ್ಪಡಿಸುವ ಮೂಲಕ ತಾವು ಓದಿದ ಶಾಲೆಯ ಮತ್ತು ತಮಗೆ ಪಾಠ ಮಾಡಿದ ಶಿಕ್ಷಕರಿಗೆ ಗೌರವ ನೀಡಿದ್ದಾರೆ. ಹಳೆಯ ವಿದ್ಯಾರ್ಥಿಗಳು ಪ್ರಸ್ತುತ ಶಾಲೆಗೆ ಅಗತ್ಯವಿರುವ ಸಾಮಗ್ರಿಗಳನ್ನು ಕೊಡಿಸಿದ್ದಾರೆ. ಮುಂದಿವೂ ಕೂಡ ತಮ್ಮ ಗ್ರಾಮದ ಶಾಲೆಯ ಮತ್ತು ವಿದ್ಯಾರ್ಥಿಗಳ ಪ್ರಗತಿಗೆ ಸಹಕರಿಸಬೇಕು ಎಂದು ಕೋರಿದರು. ಈ ಸಂದರ್ಭದಲ್ಲಿ ಪ್ರೀತಮ ಸಿಂಗ್, ಶಾಂತಕುಮಾರ ರೇಕುಳಗಿ, ಪಾಂಡುರಂಗ ಜಮಾದಾರ, ಪ್ರತಿಭಾ ಆರ್. ಮೆಂಚ, ರೇವಣ್ಣ ಚಾಪೆ, ಶಿವರಾಜ ಜಿ, ಮನಕರ್ಣ, ಜಮನಬಾಯಿ ಡಾಕುಳಗಿ, ವೈಜೀನಾಥ ನಿಂಬುರೆ, ಕಾಶಿನಾಥ ಮಂಗಲಗಿ, ಸುಂದರ ಕೊಡಂಬಲ್, ಶಂಕರರಾವ ದಾಸ, ದೇವಿಂದ್ರ ಓಕಳಿ, ಪ್ರಮುಖರಾದ ಶಿವಪುತ್ರಪ್ಪ ಸಾದ, ಮಲ್ಲಿಕಾರ್ಜುನ ಪೊಲೀಸ್ ಪಾಟೀಲ, ಸಂಜುಕುಮಾರ ದಾಸ, ಜಗನಾಥ ಮಜರ್ಗೆ, ಹಳೆ ವಿದ್ಯಾರ್ಥಿಗಳಾದ ಗಣೇಶ ಸಾದ, ರಾಜಕುಮಾರ ಚಿಂಚೋಳಿಕರ, ರಾಜಕುಮಾರ ಪಂಚಾಳ, ಮುಸ್ತಫಾ, ಶ್ರೀನಿವಾಸ ದಾಸ, ರಾಮರೆಡ್ಡಿ, ಸಿದ್ಧಾರ್ಥ, ಸತೀಶ ದಾಸ, ಡಾ. ಶ್ರೀಕಾಂತ ಚಿಂಚೋಳಿಕರ, ಸುಲೋಚನಾ ಬೋರಳ, ವಿಜಯಲಕ್ಷ್ಮಿ, ಅವಿನಾಶ ಬುಜಿ, ನ್ಯಾಯವಾದಿ ಸಿದ್ಧಾರ್ಥ, ಗುಂಡಪ್ಪ ಮದರಗಿ, ಅನೀಲ ಕತ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಡಿವಾಳ ಮಾಚಿದೇವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪಟ್ಟಣದಲ್ಲಿ ಮಡಿವಾಳ ಸಮಾಜದ ವತಿಯಿಂದ ಮಡಿವಾಳ ಮಾಚಿದೇವರ ಜಯಂತಿ ಆಚರಿಸಲಾಯಿತ್ತು. ಮಡಿವಾಳ ಸಮಾಜದ ತಾಲೂಕಾಧ್ಯಕ್ಷ ಬಸವರಾಜ ಮಡಿವಾಳ ಅವರು ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, 12ನೇ ಶತಮಾನದ ಮಡಿವಾಳ ಮಾಚಿದೇವ ಆದ್ಯ ವಚನಕಾರ. ಅವರೊಬ್ಬ ವಚನಗಳ ಸಂರಕ್ಷಕ. ಇಂತಹ ಮಹಾನ್ ವ್ಯಕ್ತಿಗಳ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ದೇವಿದಾಸ ಮಡಿವಾಳ, ಮಾರುತಿ ಮಡಿವಾಳ, ದತ್ತಾತ್ರೇಯ, ರಾಜಕುಮಾರ, ಚಂದ್ರಕಾಂತ ಥೋರೆ, ಗುಂಡಪ್ಪ ಮಡಿವಾಳ ಸತೀಶ, ನಾಗರಾಜ, ರಾಮ, ಆಕಾಶ, ಮಾರುತಿ, ಸಂಜುಕುಮಾರ ಅನೀಲಕುಮಾರ ಸೇರಿದಂತೆ ಮಹಿಳೆಯರು ಉಪಸ್ಥಿತರಿದ್ದರು.

# ಒಂದು ದಿನ ರಜೆಗೆ ಆಗ್ರಹಿಸಿ ಅಂಗಡಿ ಕಾರ್ಮಿಕರ ಮನವಿ



ಸುರಪುರ:ಫೆ.1: ತಾಲೂಕಿನ ಕೆಂಭಾವಿ ಪಟ್ಟಣದ ಅಂಗಡಿ ವಾಣಿಜ್ಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಬಡ ಕಾರ್ಮಿಕರಿಗೆ ವಾರದಲ್ಲಿ ಒಂದು ದಿನ ರಜೆ ಕೂಡ ಇರುವುದಿಲ್ಲ ಇದರಿಂದ ಕಾರ್ಮಿಕರಿಗೆ ವೈಯಕ್ತಿಕ ಕೆಲಸಗಳಿಗೆ ತುಂಬಾ ಅನಾನುಕೂಲವಾಗುತ್ತದೆ ಎಂಬುವುದು ಕಾರ್ಮಿಕರು ಮಲ್ಲಮ್ಮ ನುಡಿ ಜೊತೆ ಮಾತಾಡುವಾಗ ಅಳಲು ತೆ–ೋಡಿಕೊಂಡಿದ್ದಾರೆ. ಈ ಕುರಿತು ಕಾರ್ಮಿಕ ಇಲಾಖೆಯ ತಾಲೂಕ್ ಕಾರ್ಮಿಕ ನಿರೀಕ್ಷಕರಿಗೆ ಮನವಿ ಸಲ್ಲಿಸಿರುವ ಪದಾಧಿಕಾರಿಗಳು. ವಾರದಲ್ಲಿ ನಮಗೆ ಒಂದು ದಿನ ಮಾಲೀಕರು ರಜೆ ನೀಡಬೇಕು. ರಜೆ ಇಲ್ಲದೆ ಕೆಲಸ ಮಾಡುತ್ತಿರುವವರಿಂದ ದೈಹಿಕ ಹಾಗೂ ಮನಸ್ಸಿನ ಮೇಲೆ ಬಹಳ ಪರಿಣಾಮ ಬೀರುತ್ತದೆ ಆದ್ದರಿಂದ ಕೆಂಭಾವಿ ಪಟ್ಟಣದ ಎಲ್ಲಾ ಅಂಗಡಿ ಮುಂಗಟ್ಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಒಂದು ದಿನ ಕಡ್ಡಾಯವಾಗಿ ರಜೆ ನೀಡುವಂತೆ ಮಾಡಬೇಕು ಎಂದು ವಿನಂತಿಸಿದ್ದಾರೆ ಈ ಸಂದರ್ಭದಲ್ಲಿ ಗುರುರಾಜ್ ಅಂಗಡಿ ಉದಯ್ ಕುಮಾರ್ ಶಿವರಾಜ್ ಶಂಕರ್ ಗೌಡ ವೀರೇಶ್ ಸಕ್ರೆಪ್ಪ ಮಲ್ಲನಗೌಡ ಜಗನ್ನಾಥ್ ಶಾಂತಪ್ಪ ಸಿದ್ದಪ್ಪ ಸುರಪುರ ಫಾರೂಕ್ ಸೇರಿ ಅನೇಕರಿದ್ದರು.

# ಸರ್ಕಾರಿ ಪ್ರೌಢಶಾಲೆ ನೂತನ ಕಟ್ಟಡ ಉದ್ಘಾಟನೆ



ಸುರಪುರ : 2022.23ನೇ ಸಾಲಿನ KKRDಃಅನುದಾನದಲ್ಲಿ ದೇವರಗೋನಾಲ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ನೂತನ ಕಟ್ಟಡ ಉದ್ಘಾಟನ ನೆರವೇರಿಸಿದ ಸುರಪುರ ಮತಕ್ಷೇತ್ರದ ಜನಪ್ರಿಯ ಶಾಸಕರಾದ ಸನ್ಮಾನ್ಯ ಶ್ರೀ ರಾಜಾ ವೇಣುಗೋಪಾಲ ನಾಯಕ ಧಣಿಯವರು..ಈ ಸಂದರ್ಭದಲ್ಲಿ ಶ್ರೀ ಶ್ರೀ ಪರಮ ಪೂಜ್ಯರು ಗಳು ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಹಾಗೂ ರಾಜಾ ವಾಸುದೇವ ನಾಯಕ ಧಣಿ ಮತ್ತು ಯಾದಗಿರಿ ಜಿಲ್ಲೆಯ ಯುವ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀ ರಾಜಾ ಕುಮಾರ್ ನಾಯಕ ಧಣಿ ಹಾಗೂ ಶ್ರೀ ರಾಜಾ ಸುಶಾಂತ್ ನಾಯಕ ಧಣಿ ಮತ್ತು ವೆಂಕುಬ ಸಾಹುಕಾರ ಗುಂಡಪ್ಪ ಸೋಲಾಪುರ್, ರಾಜಶೇಖರ್ ಪಾಟೀಲ್ ವಜ್ಜಲ್, ದೊಡ್ಡ ದೇಸಾಯಿ, ರಮೇಶ್ ದೊರಿ ಆಲ್ದಾಳ ಗ್ಯಾರೆಂಟಿ ಯೋಜನೆ ಅಧ್ಯಕ್ಷರುಗಳು, ನಗರಸಭೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷರು & ಉಪಾಧ್ಯಕ್ಷರು, ಸದಸ್ಯರು ಹಾಗೂ ಊರಿನ ಗಣ್ಯಮಾನ್ಯರು ಉಪಸ್ಥಿತರಿದ್ದರು..

# ಮಹಾಕುಂಭ ಮೇಳಕ್ಕೆ ಹೊರಟ ಯಾತ್ರಾರ್ಥಿಗಳ ಬಸ್‌ಗೆ ಶಾಸಕ ಅಲ್ಲಂಪ್ರಭು ಪಾಟೀಲ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.1:ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಕಲಬುರಗಿ ನಗರದಿಂದ ಹೊರಟ ಯಾತ್ರಾರ್ಥಿಗಳ ಬಸ್‌ಗಳಿಗೆ ಶುಕ್ರವಾರ ಶಾಸಕ ಅಲ್ಲಂಪ್ರಭು ಪಾಟೀಲ ಅವರು ಚಾಲನೆ ನೀಡಿದರು.

ಒಪ್ಪಂದದ ಮೇರೆಗೆ ಐತಿಹಾಸಿಕ ಮಹಾಕುಂಭಮೇಳಕ್ಕೆ ಕಲಬುರಗಿ ನಗರದ ರಾಘವೇಂದ್ರ ಕಾಲೋನಿಯ ಮತ್ತು ರಾಜಾಪೂರ ಕಾಲೋನಿದಿಂದ ಹೊರಟ ಒಟ್ಟು ಮೂರು ನಾನ್ ಎಸಿ ಸ್ಲೀಪರ್ ಬಸ್ಸುಗಳಿಗೆ ಶಾಸಕರು ಪೂಜೆ ಮಾಡುವುದರ ಮೂಲಕ ಚಾಲನೆ ನೀಡಿ ಪ್ರಯಾಣಿಕರಿಗೆ ಶುಭ ಕೋರಿದರು.

ಕುಂಭಮೇಳಕ್ಕೆ ಬಸ್ ಸೌಲಭ್ಯ: ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ ಮಾತನಾಡಿ, ಮಹಾಕುಂಭ ಮೇಳಕ್ಕೆ ಹೊರಡುವ ಯಾತ್ರಾರ್ಥಿಗಳ ಅನುಕೂಲಕ್ಕೆ ಕೆ.ಕೆ.ಆರ್.ಟಿ.ಸಿ. ಸಂಸ್ಥೆಯಿಂದ ಅಮೋಘವರ್ಷ ನಾನ್ ಎ.ಸಿ. ಸ್ಲೀಪರ್ ಮತ್ತು ವೇಗದೂತ ಸಾರಿಗೆ ಬಸ್‌ಗಳನ್ನು ಒಪ್ಪಂದದ ಮೇರೆಗೆ ಪಡೆಯಲು ಸೌಲಭ್ಯ ಕಲ್ಪಿಸಿದೆ ಎಂದರು.

29 ಆಸನ ಸಂಖ್ಯೆಯ ಅಮೋಘ ವರ್ಷ ನಾನ್ ಎ.ಸಿ. ಸ್ಲೀಪರ್ ಒಪ್ಪಂದಕ್ಕೆ 4.10 ಲಕ್ಷ ರೂ. ವೆಚ್ಚವಾಗಲಿದ್ದು, ಪ್ರತಿ ಪ್ರಯಾಣಿಕರು 15,000 ರೂ. ಭರಿಸಬೇಕಾಗುತ್ತದೆ. ಅದೇ ರೀತಿ 49 ಆಸನ ಸಂ–ಖ್ಯೆಯ ವೇಗದೂತ ಸಾರಿಗೆ ಬಸ್ ಒಪ್ಪಂದಕ್ಕೆ 2.85 ಲಕ್ಷ ರೂ. ವೆಚ್ಚವಾಗಲಿದ್ದು, ತಲಾ ಪ್ರಯಾಣಿಕರು 6,000 ರೂ. ಪಾವತಿಸಬೇಕು. ಕಲಬುರಗಿ–ನಾಂದೇಡ್–ನಾಗಪೂರ–ರಾವರಿ–ಪ್ರಯಾಗರಾಜ್–ಅಯೋಧ್ಯಾ–ವಾರಣಾಸಿ–ಉಜ್ಜೈನ್–ಓಂಕಾರೇಶ್ವರ ಮಾರ್ಗವಾಗಿ ಸಂಚರಿಸಲಿದೆ.

ಒಪ್ಪಂದ ಬಸ್ ಸೌಲಭ್ಯ ಪಡೆಯಲು ವಿಭಾಗೀಯ ಸಾರಿಗೆ ಅಧಿಕಾರಿ–7760992101, ಕಲಬುರಗಿ ಘಟಕ–1 ವ್ಯವಸ್ಥಾಪಕ–7760992113, ಕಲಬುರಗಿ ವಿಭಾಗ 2–7760984086, ಯಾದಗಿರಿ ವಿಭಾಗ–7760992452, ಬೀದರ ವಿಭಾಗ–7760992202, ರಾಯಚೂರು ವಿಭಾಗ–7760992352, ಕೊಪ್ಪಳ ವಿಭಾಗ–7760992452, ಹೊಸಪೇಟೆ ವಿಭಾಗ–7760992302, ಬಳ್ಳಾರಿ ವಿಭಾಗ–7760992152, ವಿಜಯಪುರ ವಿಭಾಗ–7760992252 ಹಾಗೂ ಕೇಂದ್ರ ಕಚೇರಿ–7760992024 ಇವರನ್ನು ಸಂಪರ್ಕಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯ ಸಂಚಾರಿ ಅಧಿಕಾರಿ ಸಂತೋಷಕುಮಾರ, ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.



ಶಹಾಪುರ:2018 ರಲ್ಲಿ ಯಾದಗಿರಿಯಲ್ಲಿ ನಡೆದ ಭೀಮ ಪುಷ್ಕರ ಕುಂಭಮೇಳದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ಪತ್ನಿ ಸಮೇತ ಪೂಜೆ ಸಲ್ಲಿಸಿದರು. ಆ ಫೋಟೋ ಇವಾಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ರಂಗಸ್ನಾನದ ಕುರಿತು ಹೇಳಿಕೆ. ಬಿಜೆಪಿಯವರ ಆಕ್ರೋಶಕ್ಕೆ ಗುರಿಯಾಗಿದ್ದಾರೆ.

# ದರ್ಶನಾಪುರ ಬಗ್ಗೆ ಹಗುರವಾಗಿ ಮಾತನಾಡುವಾಗ ನಾಲಿಗೆ ಮೇಲೆ ಎಚ್ಚರವಿರಲಿ:ಉಳಂಡಗೇರಿ



ಶಹಾಪೂರ:ಫೆ.1:ಬಿಜೆಪಿ ನೂತನ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಅವರು ಸಚಿವ ಶರಣಬಸಪ್ಪಗೌಡ ದರ್ಶನಪುರ ಮತ್ತು ಅವರ ಕುಟುಂಬದ ಬಗ್ಗೆ ಹೇಳಿರುವ ಹೇಳಿಕೆ ಖಂಡನೀಯ ಕೂಡಲೇ ಬಿಜೆಪಿ ನೂತನ ಜಿಲ್ಲಾಧ್ಯಕ್ಷರು ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕೆಂದು ಕೆಪಿಸಿಸಿ ಜಿಲ್ಲಾ ವಕ್ತಾರರಾದ ಮಲ್ಲಣ್ಣ ಗೋಗಿ ಉಳ್ಳಂಡಗೇರಿ ಹೇಳಿದರು. ಸಚಿವರ ಗೃಹ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವರ ಕುಟುಂಬ ಕ್ಯಾಬಿನೆಟ್ ಇದ್ದಂತೆ ಅವರ ಕಾಕಾ ಗ್ರಾಮೀಣಾಭಿವೃದ್ಧಿ ಸಚಿವರು ಶಹಪುರ ಮತ್ತು ಯಾದಗಿರಿಗೆ ಮಾತ್ರ ಸಚಿವರು ಸೀಮಿತ. ಉಳಿದ ತಾಲೂಕಿನ ಬಗ್ಗೆ ಸಚಿವರು ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ನೂತನ ಜಿಲ್ಲಾಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ ಯಾವ ಆಧಾರದ ಮೇಲೆ ಹೇಳಿದ್ದಾರೋ ಎನ್ನುವುದು ಗೊತ್ತಾಗುತ್ತಿಲ್ಲ. ಜಿಲ್ಲಾಧ್ಯಕ್ಷ ಸ್ಥಾನ ಸಿಕ್ಕ ತಕ್ಷಣವೇ ಕೋತಿಗೆ ಹೆಂಡ ಕುಡಿಸಿದಂತೆ ಮಾತನಾಡುತ್ತಿದ್ದಾರೆ. ಈ ರೀತಿ ನಾಲಿಗೆ ಹರಿಬಿಟ್ಟಿರುವುದು ಸರಿಯಲ್ಲ. ಒಂದು ಕುಟುಂಬ ರಾಜ್ಯದ ಕ್ಯಾಬಿನೆಟ್ ಆಗಲು ಸಾಧ್ಯವೇ ಶಹಾಪುರ ಕ್ಷೇತ್ರ ಯಾವ ರೀತಿ ಅಭಿವೃದ್ಧಿ ಹೊಂದಿದೆ ಎಂದು ಅವರಿಗೆ ಗೊತ್ತಿಲ್ಲ ನಮ್ಮ ಸಚಿವರು ಮೂರು ಬಾರಿ ಸಚಿವರಾಗಿ ಐದು ಬಾರಿ ಶಾಸಕರಾಗಿ ಬಡವರ ಏಳಿಗೆ ಬಗ್ಗೆ ಅವರಿಗಿರುವ ಕಾಳಜಿ ನಿಮಗೆ ಗೊತ್ತಿದೆಯೇ ಎಂದು ಕೇಳಿದರು.

ಸಚಿವರಿಗೆ ಟೀಕೆ ಮಾಡುವುದರಿಂದ ದೊಡ್ಡವರಾಗುತ್ತಾರೆ ಎನ್ನುವುದು ಮೂರ್ಖತನದ ಪರಮಾವಧಿ ಈ ಹಿಂದೆ ಬಿಜೆಪಿ ಜಿಲ್ಲಾಧ್ಯಕ್ಷರಾದ ಅಮಿನ್ ರೆಡ್ಡಿ ಯಾಳಗಿಯವರು ಕೇವಲ ಒಂದೇ ವರ್ಷದಲ್ಲಿ ಸ್ಥಾನ ತ್ಯಜಿಸಿದ್ದಾರೆ ಈ ರೀತಿ ಹೇಳಿಕೆ ಕೊಡಿಸುತ್ತಿರುವವರು ಯಾರು ಎನ್ನುವುದು ನಮಗೆ ಗೊತ್ತಿದೆ. ಕೂಡಲೇ ಬಸವರಾಜ ವಿಭೂತಿಹಳ್ಳಿ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕೆಂದು ಆಗ್ರಹಿಸಿದರು.

ಕೆಪಿಸಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಲ್ಲಾಂಪಟೇಲ್ ಮಾತನಾಡಿ ಶಹಪುರ ಕ್ಷೇತ್ರದ 265 ಬೂತ್‌ಗಳಲ್ಲಿ ಸಚಿವರು ಯಾವ ರೀತಿ ಅಭಿವೃದ್ಧಿ ಮಾಡಿದ್ದಾರೆ ಎಂದು ನೂತನ ಅಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ ಅವರು ಬಂದು ನೋಡಬೇಕು ಶಿಕ್ಷಣ ಆರೋಗ್ಯ ಸಾರಿಗೆ ವ್ಯವಸ್ಥೆಯಲ್ಲಿ ಅಭೂತಪೂರ್ವ ಅಭಿವೃದ್ಧಿ ಗೈದಿದ್ದಾರೆ ಎಂದು ನೋಡಿ. ಜಿಲ್ಲೆಯಾದ್ಯಂತ ಸಾರ್ವಜನಿಕರ ಕೆಲಸಗಳನ್ನು ಮಾಡಿದ್ದಾರೆ ಬಡವರ ಕೆಲಸ ಮಾಡುತ್ತಿದ್ದಾರೆ ನೂತನ ಬಿಜೆಪಿ ಜಿಲ್ಲಾಧ್ಯಕ್ಷರು ಯಾವ ಆಧಾರದ ಮೇಲೆ ಈ ರೀತಿ ಹೇಳಿಕೆ ಕೊಟ್ಟರು. ಕೂಡಲೇ ಸಾರ್ವಜನಿಕರ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

ಮಹಾದೇವಪ್ಪ ಸಾಲಿಮನಿ, ಶಾಂತು ಪಾಟೀಲ್, ಮೌನೇಶ್ ನಾಟೇಕಾರ, ಭೀಮರಾಯ ಜುನ್ನ, ಇದ್ದರು.

# ಬಹದ್ದೂರಬಂಡಿ ನೀರಾವರಿಯಿಂದ ನಮ್ಮ ಭಾಗದ ರೈತರಿಗೆ ಅನುಕೂಲ : ಸಚಿವ ತಂಗಡಗಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.1:ಬಹದ್ದೂರುಬಂಡಿ ಏತ ನೀರಾವರಿಯಿಂದ ನಮ್ಮ ಭಾಗದ ರೈತರಿಗೆ ಅನುಕೂಲವಾಗಲಿದೆ.ಈಭಾಗದಲ್ಲಿ ಮಣ್ಣುಫಲವತ್ತಾಗಿರುವುದರಿಂದ ಇಂಥಹ ಮಣ್ಣಿಗೆ ನೀರು ಬಂದು ಬಿಟ್ಟರೆ ರೈತನ ಬದುಕು ಬಂಗಾರವಾಗುತ್ತದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಹೇಳಿದರು.

ಅವರು ಶುಕ್ರವಾರ ಮುಂಡರಗಿ ಜಾಕವೆಲ್ ಪಾಯಿಂಟ್ ಹತ್ತಿರ ಬಹದ್ದೂರ್ ಬಂಡಿ ನವಲಕಲ್ ಏತ ನೀರಾವರಿ ಯೋಜನೆ ಪಂಪ್‌ಹೌಸ್‌ನ ಪ್ರಾಯೋಗಿಕ ಚಾಲನಾ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

2018ರಲ್ಲಿ ಬಹದ್ದೂರ್ ಬಂಡಿ ಏತ ನೀರಾವರಿ ಯೋಜನೆಗೆ ಅಡಿಗಲ್ಲು ಹಾಕಲಾಗಿತ್ತು. ಬಹುದಿನಗಳ ಕನಸು ಈಗ ನನಸಾಗಿದೆ. ನಮ್ಮ ಶಾಸಕರು ನಾವು ಮೊನ್ನೆ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ 236 ಕೋಟಿ ಹಣ ಈ ಯೋಜನೆ ಫಿಡರ್ ಚನಾಲ್‌ಗಾಗಿ ಮಂಜೂರ ಮಾಡಿಸಿದ್ದೆವೆ. ನಮ್ಮ ರೈತರು ನೆಮ್ಮದಿಯಿಂದ ಇರಬೇಕು. ಅಧಿಕಾರ ಬರುತ್ತೆ ಹೋಗುತ್ತದೆ ಅಧಿಕಾರ ಇದ್ದಾಗ ಒಳ್ಳೆಯ ಕೆಲಸ ಮಾಡಬೇಕು. ನಾನು ಮೊದಲು ಕೆರೆ ತುಂಬಿಸುವ ಯೋಜನೆ ಕನಕಗಿರಿಯಿಂದಲೆ ಆರಂಭಿಸಿದ್ದೆ. ಬಳಿಕ ಎಲ್ಲಾ ಕಡೆ ಈಯೋಜನೆ ಆರಂಭಿಸಲಾಯಿತು. ಇದರಿಂದ ರೈತರಿಗೆ ಬಹಳ ಅನುಕೂಲವಾಗಿದೆ ಎಂದು ಹೇಳಿದರು.



ಬರುವ ದಿನಗಳಲ್ಲಿ ನನ್ನ ಕ್ಷೇತ್ರದಲ್ಲಿ ತೋಟಗಾರಿಕೆ ಪಾರ್ಕ್ ಮಾಡುತ್ತೆನೆ. ಇದು ಮಾತ್ರವಲ್ಲದೆ ಸಿಂಗಟಾಲೂರು ಯೋಜನೆ ಮುಗಿಸಿ ರೈತರಿಗೆ ನೀರು ಕೊಡುವ ಕೆಲಸ ಮಾಡುತ್ತೆವೆ. ಗಿಣಿಗೇರಾ ಕೆರೆ ತುಂಬಿಸುವ ಯೋಜನೆ ವಿಚಾರ ಪ್ರಸ್ತಾಪ ಮಾಡಲಾಗಿದೆ. ಬಹದ್ದೂರ್ ಬಂಡಿ ಏತ ನೀರಾವರಿ ಯೋಜನೆಯಿಂದ 17 ಗ್ರಾಮಗಳ ವ್ಯಾಪ್ತಿಯ 12,988 ಎಕರೆ ಪ್ರದೇಶದ ಜಮೀನಿಗೆ ನೀರಾವರಿ ಸೌಲಭ್ಯ ದೊರೆಯಲಿದೆ ಎಂದು ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ ಬಹದ್ದೂರ್ ಬಂಡಿ ಏತ ನೀರಾವರಿ ಯೋಜನೆ ಈ ಭಾಗದ ರೈತರ ಬಹುದಿನಗಳ ಹೋರಾಟದ ಫಲವಾಗಿದೆ. ನೀರಾವರಿಯಿಂದ ರೈತರ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದೆ. ಸಿಂಗಟಾಲೂರು ಏತ ನೀರಾವರಿಯಿಂದ 90 ಸಾವಿರ ಎಕರೆ ಜಮೀನು ನೀರಾವರಿಯಾಗಲಿದೆ. ಬಹದ್ದೂರುಬಂಡಿ-ನವಲಕಲ ಏತ ನೀರಾವರಿ ಯೋಜನೆಗೆ 188 ಕೋಟಿ ರೂ. ಹಾಗೂ ಅಳವಂಡಿ-ಬೆಟಗೇರಿ ಏತ ನೀರಾವರಿ ಯೋಜನೆಗೆ 88 ಕೋಟಿ ರೂ ಅನುದಾನ ನೀಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು ಒಂದೇ ಸಲಕ್ಕೆ ಈ ಯೋಜನೆಗಳಿಗೆ ಚಾಲನೆ ನೀಡಿದ್ದರು ಎಂದು ಹೇಳಿದರು.

ಬಹದ್ದೂರ್ ಬಂಡಿ ಏತ ನೀರಾವರಿ ಕೆನಾಲ ಕೆಲಸಕ್ಕೆ ರೂ. 256 ಕೋಟಿ ಹಣ ಮಂಜೂರು ಮಾಡಲಾಗಿದೆ. ರೈತರ ಪರವಾಗಿ ಕೆಲಸ ಮಾಡಿದಾಗ ಹೊಲಗಳಿಗೆ ನೀರಾವರಿ ಆಗುತ್ತವೆ. ನೀರಾವರಿ. ಆರೋಗ್ಯ. ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಜೊತೆಗೆ ದೂರದೃಷ್ಟಿಕೋನ ಇಟ್ಟುಕೊಂಡು ಕೆಲಸ ಮಾಡುತ್ತಿದ್ದೆವೆ. ಇದೇ ತಿಂಗಳಲ್ಲಿ 450 ಬೆಡ್ಡಿನ ಆಸ್ಪತ್ರೆ ಲೋಕಾರ್ಪಣೆ ಮಾಡುವ ಕೆಲಸ ಮಾಡುತ್ತಿದ್ದೆವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್. ಮಾಜಿ ಸಂಸದರಾದ ಸಂಗಣ್ಣ ಕರಡಿ. ಮಾಜಿ. ಶಾಸಕರಾದ ಕೆ.ಬಸವರಾಜ ಹಿಟ್ನಾಳ, ಜಿಲ್ಲಾ ಪಂಚಾಯತ ಮಾಜಿ ಸದಸ್ಯರಾದ ಗೂಳಪ್ಪ ಹಲಗೇರಿ ಮಾತನಾಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ. ನೀರಾವರಿ ಕೇಂದ್ರ ವಲಯ ಕೆ.ಎನ್.ಎನ್.ಎಲ್ ಮುನಿರಾಬಾದ ಮುಖ್ಯ ಇಂಜಿನಿಯರ್ ಹನುಮಂತಪ್ಪ ದಾಸರ. ಅಧೀಕ್ಷಕ ಇಂಜಿನಿಯರ್ ಬಸವರಾಜ. ಕಾರ್ಯಪಾಲಕ ಇಂಜಿನಿಯರ್ ಗಿರೀಶ್. ಕೃಷ್ಣ ರೆಡ್ಡಿ.ಗಾಳಪ್ಪಪೂಜಾರಿ.ಯಂಕಪ್ಪ ಸೇರಿದಂತೆ ರೈತರು ಹಾಗೂ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# 'ನರೇಗಾ' ಪ್ರಶಸ್ತಿಗೆ ಮುಗಳೊಳ್ಳಿ ಗ್ರಾಪಂ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.1:ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಹಾತ್ಮಗಾಂಧಿ ನರೇಗಾ ಯೋಜನೆಯ ಅನುಷ್ಠಾನದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಗ್ರಾಮ ಪಂಚಾಯತಿಗಳಿಗೆ ನೀಡುವ ನರೇಗಾ ಪ್ರಶಸ್ತಿಗೆ ಬಾಗಲಕೋಟೆ ತಾಲ್ಲೂಕಿನ ಮುಗಳೊಳ್ಳಿ ಗ್ರಾಪಂ ಆಯ್ಕೆಯಾಗಿದೆ.

2023-24 ನೇ ಸಾಲಿನ ಪ್ರಶಸ್ತಿಗೆ ಮುಗಳೊಳ್ಳಿ ಗ್ರಾಪಂ ಆಯ್ಕೆಯಾಗಿದ್ದು, ಫೆ.5 ರಂದು ಬೆಂಗಳೂರಿನ ವಸಂತ ನಗರದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಮೆಮೋರಿಯಲ್ ಟ್ರಸ್ಟ್‌ನ ಅಂಬೇಡ್ಕರ್ ಭವನದಲ್ಲಿ ನಡೆಯುವ 'ನರೇಗಾ ಹಬ್ಬ-2025'ರ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಯುಕ್ತರ ಪ್ರಕಟಣೆ ತಿಳಿಸಿದೆ.

ಫೆ.5ರಂದು ನಡೆಯುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ತಾವು ಪಾಲ್ಗೊಳ್ಳುವುದಾಗಿ ಪಿಡಿಓ ಆರ್.ಎಚ್.ನದಾಫ ತಿಳಿಸಿದ್ದಾರೆ.

ಕಳೆದ 2021-22 ರಲ್ಲಿ ಮುಗಳೊಳ್ಳಿ ಗ್ರಾಪಂಗೆ 'ಗಾಂಧಿ ಗ್ರಾಮ' ಪ್ರಶಸ್ತಿ ಲಭಿಸಿತ್ತು.

# ನಾವೇಲ್ಲರೂ ಮಡಿವಾಳ ಮಾಚಿದೇವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯೋಣ:ಸಚಿವ ರಹೀಂ ಖಾನ್

ಮಲ್ಲಮ್ಮ ನುಡಿ ವಾರ್ತೆ

ಬೀದರ :ಫೆ.1: ಮಡಿವಾಳ ಮಾಚಿದೇವರು 12ನೇ ಶತಮಾನದಲ್ಲಿ ವಚನಗಳನ್ನು ಸಂರಕ್ಷಿಸಿದ ವೀರಗಣಚಾರಿ ಗುರು ಆಗಿದ್ದು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವರಾದ ರಹೀಂ ಖಾನ್ ಹೇಳಿದರು.

ಅವರು ಇಂದು ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಅವರ ಸಂಯುಕ್ತಾಶ್ರಯದಲ್ಲಿ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಮಡಿವಾಳ ಮಾಚಿದೇವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಲಿಂಗಾಯತ ಧರ್ಮದಲ್ಲಿ ನಿಷ್ಠಾವಂತಕಾಯಕನಿವಾಸಿಗಳಾಗಿದ್ದ ಮಡಿವಾಳ ಮಾಚಿದೇವರು ಸಮಾಜಸೇವೆಯಲ್ಲಿ ನಿರಂತರವಾಗಿ ತೊಡಗಿದರು. ಕಾಯಕದಲ್ಲಿ ದೇವರನ್ನು ಕಂಡರು, ದೇವರು ಗುಡಿಯಲ್ಲಿ ಇರುವುದಿಲ್ಲ, ದೇವರು ನಿರಾಕಾರನಾಗಿದ್ದು ಎಲ್ಲೆಡೆ ವಿಶ್ವವ್ಯಾಪಿಯಾಗಿದ್ದಾನೆ. ಎಲ್ಲರೂ ಉಸಿರಾಡುವ ಗಾಳಿ ಒಂದೇ. ದೇವರು ಒಬ್ಬನೇ ನಾಮ ಹಲವು ಎಂಬಂತೆ ನಾವೆಲ್ಲರೂ ಒಂದೇ ಸಮಾಜದಲ್ಲಿ ಎಲ್ಲರೂ ಸಹಬಾಳ್ವೆಯಿಂದ ಬಾಳಬೇಕು ಎಂದರು.

ಬೀದರ ಅಕ್ಕಮಹಾದೇವಿ ಮಹಾವಿದ್ಯಾಲಯದ ರಸಾಯನ ಶಾಸ್ತ್ರ ವಿಭಾಗದ ಹಿರಿಯ ಉಪನ್ಯಾಸಕರಾದ ಶಿವಶರಣಪ್ಪಾ ಹುಗ್ಗಿ ಪಾಟೀಲ ಅವರು ತಮ್ಮ ಅತಿಥಿ ಉಪನ್ಯಾಸದಲ್ಲಿ ಮಾತನಾಡಿ, ಹನ್ನೆರಡನೆಯ ಶತಮಾನ ಅಚ್ಚರಿಯ ಶತಮಾನ. ಸಮಗ್ರ ಕ್ರಾಂತಿಯ ಶತಮಾನ, ಸಮಾನತೆಯ ಶತಮಾನ, ಬಟ್ಟೆ ತೊಳೆಯುವವರು, ಬುಟ್ಟಿ ಮಾಡುವವರು, ಕಸಗೂಡಿಸುವವರು, ದನ ಕಾಯುವವರು ಇಂತಹ ಸಾಮಾನ್ಯರಲ್ಲಿ ಸಾಮಾನ್ಯರನ್ನು ಸಂಸ್ಕಾರಕೊಟ್ಟು ಲೋಕಕ್ಕೆ ಅರಿವು ನೀಡುವ ಗುರುಸ್ವರೂಪವಾದರು, ಲೋಕ ಗುರುವಾದರು, ಇದಕ್ಕೆಲ್ಲ ಜಗವೆಲ್ಲಕ್ಕೂ ಗುರು ಎನಿಸಿಕೊಂಡ ಬಸವಣ್ಣನವರೇ ಕಾರಣರು. ವೀರಗಣಾಚಾರಿ, ವಚನ ಸಾಹಿತ್ಯದ ರಕ್ಷಕ ಮಹಾನುಭಾವಿ ಮಡಿವಾಳ ಮಾಚಿದೇವರ ತಂದೆಗಳು ಶರಣ ಶ್ರೇಷ್ಠರು. ಕೇವಲ ಬಟ್ಟೆ ತೊಳೆಯುವ ಮಡಿವಾಳರಾಗಿರದೆ ಸಕಲ ಮಾನವರಲ್ಲಿಯು ಮಲಿನತೆ ಹೋಗಲಾಡಿಸುವ ಗುರು ಸ್ವರೂಪರಾಗಿದ್ದರು. ಲಿಂಗಾಂಗ ಸಾಮರಸ್ಯದ ಅನುಭಾವ ಜಗದ ಜನತೆಗೆ ತಿಳಿಹೇಳುವ ಮಹಾಜಂಗಮ ಮೂರ್ತಿಯಾಗಿದ್ದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಶಿವುಕುಮಾರ ಶೀಲವಂತ ಅವರು ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಮಡಿವಾಳ ಮಾಚಿದೇವರ ಭಾವಚಿತ್ರದ ಮೆರವಣಿಗೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಅವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಸ್ವಾಮಿ ಮತ್ತು ತಂಡದಿಂದ ಮಡಿವಾಳ ಮಾಚಿದೇವರ ಕುರಿತು ವಚನ ಗಾಯನ ನಡೆಸಿಕೊಟ್ಟರು

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವುಕುಮಾರ ಶೀಲವಂತ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಮಡಿವಾಳ ಮಾಚಿದೇವರ ಸಮಾಜದ ಜಿಲ್ಲಾಧ್ಯಕ್ಷ ಸುಭಾಷ್ ಮಡಿವಾಳ, ಉಪಾಧ್ಯಕ್ಷ ಬಾಬುರಾವ್ ಮಡಿವಾಳ ಹಾಗೂ ಮುಖಂಡರಾದ ದಿಗಂಬರ ಮಡಿವಾಳ, ಮಹೇಶ್ ಮಡಿವಾಳ, ಶಿವುಕುಮಾರ ಕಂದಗೂಳ, ಅಶೋಕ್ ತೇಲಂಗ್, ದೀಪಕ ಮಡಿವಾಳ, ಚನ್ನಬಸವ ಹೇಡೆ ಸೇರಿದಂತೆ ಇತರೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಶಾಲಾ-ಕಾಲೇಜು ಹೋಗುವ ಮಕ್ಕಳ ವಿದ್ಯಾಭ್ಯಾಸ ಜೊತೆ ಆಟ ಆಡುತ್ತಿರುವ ಸಾರಿಗೆ ಇಲಾಖೆ



ಶಾಲಾ-ಕಾಲೇಜು ಹೋಗುವ ಮಕ್ಕಳ ವಿದ್ಯಾಭ್ಯಾಸ ಜೊತೆ ಆಟ ಆಡುತ್ತಿರುವ ಸಾರಿಗೆ ಇಲಾಖೆ

ಯಾಕಪ್ಪ ನಮ್ಗೆ ಫ್ರೀ ಬಸ್ಸ ಮಾಡಿರಿ, ಮೊದ್ಲೇ ರೊಕ್ಕ ಕೊಟ್ಟಿ ಹೋಗುವ ನಮ್ಮ ಊರಿಗ ಎಲ್ಲಾ ಬಸ್ಸು ನಿಲ್ತಿವು ಟೈಮ್ಗಾ ಕೆಲಸ ಆಗ್ತಿವ, ಇವ್ವು ಫ್ರೀ ಬಸ್ಸು ಕೈ ಮಾಡೂರು ನಿಲ್ಲುತ್ತಿಲ್ಲ, ಬೇರೆ ಉರಿಗ ಹೋಗಿ ಬರುವಾಗ ನಮ್ಮ ಊರಿಂದ ಮೇಲಿಂದೆ ಹೋಗ್ತಾವ ಅದ್ದೂರು ನಮ್ಮ ಊರಿ ಮ್ಯಾಲ್ ನಿಲ್ಲಾಸಲ ಹೋಗ್ಯಾರ ಎಂದು ಮಹಿಳೆ ಪ್ರಯಾಣಿಕರು ತಮ್ಮ ಕಷ್ಟವನ್ನು ಹೀಗೆ ಹೇಳಿದರು.

ಸಚಿವರಾದ ಈಶ್ವರ ಖಂಡ್ರೆ ಯವರು ಕಮಲನಗರ ಭಾಗಕ್ಕೆ ಬಂದಾಗ ಜನ ತಮ್ಮ ಬಸ್ಸು ಸಮಸ್ಯೆಯನ್ನು ಹೇಳಿದಾಗ ತಕ್ಷಣ ಡಿಪೋ ಮೇನಜರ್ ಅವರಿಗೆ ಕರೆ ಮಾಡಿ ಬಸ್ಸು ನಿಲ್ಲಿಸಲು ಆದೇಶ ನೀಡಿದರು. ಒಂದು ವಾರ ಎಲ್ಲಾ ಬಸ್ಸು ನಿಲ್ಲಿಸುವ ನಾಟಕಮಾಡಿ ನಂತರ ಮತ್ತೆ ಅದೇ ಹಳೆ ರಾಗ ಎನ್ನುವಂತೆ ಪ್ರಯಾಣಿಕರಿಗೆ ತೊಂದರೆ ನೀಡುತ್ತಿದ್ದಾರೆ.

ಗ್ರಾಮ ಸಂಚಾರ ವೇಳೆ ಶಾಸಕರು, ಡಿಗ್ಗಿ ಗ್ರಾಮಕ್ಕೆ ಬಂದಾಗ ಆ ಸಂದರ್ಭದಲ್ಲಿ ಮಹಿಳೆ ಒಬ್ಬರು ಅಲ್ಲಿಕೂಡ ಇದ್ದೆ ಸಮಸ್ಯೆ ಹೇಳಿದರು. ಕಾರ್ಯಕ್ರಮದಲ್ಲಿ ಇದ್ದ ಸಾರಿಗೆ ಅಧಿಕಾರಗಳಿಗೆ ತಿಳಿಸಿದ ಶಾಸಕ ಪ್ರಭು ಚವ್ಹಾಣ ಅವರ ಆದೇಶಕ್ಕೂ ಕೂಡ ಕವಡೆ ಕಾಸಿನ ಕಿಮ್ಮತ್ತು ಸಾರಿಗೆ ಇಲಾಖೆ ಕೊಡುವ ಮನಸಿಲ್ಲ ಎನ್ನುವಂತಿದೆ.

ಈ ಸಂಬಂಧ ಶಾಲೆ ಸಮಯಕ್ಕೆ ಬಸ್ಸು ಕೊರತೆ ಮತ್ತು ಬಸ್ಸು ನಿಲ್ದಾಣ ಬಗ್ಗೆ ವಿದ್ಯಾರ್ಥಿಗಳು ಹಾಗೂ ಕನ್ನಡ ಪರ ಸಂಘಟನೆಗಳ ಒಗ್ಗೂಟ ಬಸ್ಸ ಸಮಸ್ಯೆ ಬಗ್ಗೆ ಹರಿಸುವಂತೆ ತಹಸೀಲ್ದಾರ ಅವರಿಗೆ ಮನವಿ ಕೊಟ್ಟರು ಇಲ್ಲಿಯವರೆಗೂ ಯಾವದೇ ಪ್ರಯೋಜನವಾಗಿಲ್ಲ.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.1:ತಾಲೂಕಿನ ಕೇಂದ್ರವಾಗಿ ವರ್ಷಗಳೇ ಕಳೆದರು ಕೂಡು ಇಲ್ಲಿನ ಸಾರ್ವಜನಿಕರ ಸಮಸ್ಯೆಗಳಿಗೆ ಮುಕ್ತಿ ಮಾತ್ರ ಸಿಗುತ್ತಿಲ್ಲ. ಅದರಲ್ಲಿ ಒಂದಾದ ಈ ಬಸ್ಸು ಸಮಸ್ಯೆಯಂತೂ ಶಾಲಾ ಕಾಲೇಜು ಮಕ್ಕಳ ವಿದ್ಯಾಭ್ಯಾಸ ಜೊತೆ ಆಟ ಆಡುತ್ತಿದೆ.

ಕಮಲನಗರ ಪಟ್ಟಣ-ಕ್ಕೆ ಅಥವಾ ಕಮಲನಗರ ನಿಂದ ಭಾಲ್ಕಿ, ಬೀದರ ಕಡೆ ವಿದ್ಯಾಭ್ಯಾಸಕ್ಕೆ ಹೋಗುವ ಮಕ್ಕಳು ಒಂದು ಎರಡೂ ತರಗತಿ ಬಸ್ಸ ನಿಲ್ದಾಣದಲ್ಲೆ ನಿಂತು ಕಳೆಯುವಂತಾಗಿದೆ, ಹಲವು ಭಾರಿ ಸಂಬಂಧ ಪಟ್ಟ ಅಧಿಕಾರಗಳ ಗಮನಕ್ಕೆ ತಂದರು ಪ್ರಯೋಜನವಾಗುತ್ತಿಲ್ಲ.

"ಮಾರಕವಾದ ಶ್ರೀ ಶಕ್ತಿ ಯೋಜನೆ, ಸರಕಾರ ಹೆಣ್ಣು ಮಕ್ಕಳಿಗೆ ಉಚಿತ ಬಸ್ಸು ಶ್ರೀ ಶಕ್ತಿ ಗ್ಯಾರಂಟಿ ಕೊಟ್ಟಿದೆ. ಅದ್ದರೆ ಮುಖ್ಯ ರಸ್ತೆಯಲ್ಲಿ ಬರುವ ಡಿಗ್ಗಿ, ಸಾವಳಿ, ಆಳಂದಿ ಗ್ರಾಮಕ್ಕೆ ಬಸ್ಸ ನಿಲ್ಲುತಿಲ್ಲ, ಈ ಗ್ರಾಮದ ಪ್ರಯಾಣಿಕರು ಹಿಡಿ ಶಾಪ ಹಾಕುತ್ತಿದ್ದಾರೆ."

ಎಸ್.ಎಸ್.ಎಲ್.ಸಿ ಪೂರ್ವ ಪರೀಕ್ಷೆ ಪ್ರಾರಂಭಗೊಂಡಿದ ಮಕ್ಕಳು ಸರಿಯಾದ ಸಮಯಕ್ಕೆ ಶಾಲೆಗೆ ಹೋಗದ್ದಿದ್ದರೆ ಅವ್ರಿಗೆ ಮುಖ್ಯ ಪರೀಕ್ಷೆಯ ಮೇಲೆ ನೆರೆ ಪರಿಣಾಮ ಬಿರುತ್ತದೆ. ಮಕ್ಕಳ್ ಭವಿಷ್ಯ ಜೊತೆ ಆಟ ಆಡುತ್ತಿರು ಬೀದರ, ಭಾಲ್ಕಿ, ಹುಮನಾಬಾದ ಸಾರಿಗೆ ಇಲಾಖೆ ಇವಾಗಲಾದ್ದರು ಎಚ್ಚತು-ಕೊಂಡು ಸರಿಯಾದ ಸಮಯಕ್ಕೆ ಹಾಗೂ ಪ್ರಯಾಣಿಕರಿಗೆ ಬಸ್ಸ ಸವಲಭ್ಯ ಒದಗಿಸಿಕೊಡಬೆಕಂದು ಪ್ರಯಾಣಿಕರು ಒತ್ತಾಯಿಸಿದ್ದಾರೆ.

# ತಂದೆ-ತಾಯಿಗಳ ಕಷ್ಟ, ಗುರುಗಳ ಶ್ರಮ ಸಾರ್ಥಕಗೊಳಿಸಲು ಬೀರಪ್ಪ ಜಗ್ಗಲ್ ಕರೆ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು, ಫೆ.1: ಸ್ಪರ್ಧಾತ್ಮಕ ಜಗತ್ತಿನಲ್ಲಿ ಸಮಯ ವ್ಯರ್ಥ ಮಾಡದೇ ಕಠಿಣ ಪರಿಶ್ರಮದಿಂದ ಓದಿದರೆ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಸಾಧನೆ ಮೂಲಕ ನಿಮಗಾಗಿ ನಿರಂತರವಾಗಿ ದುಡಿಯುವ ತಂದೆ-ತಾಯಿಗಳ ಕಷ್ಟ ಮತ್ತು ವಿದ್ಯೆ ಕಲಿಸಿದ ಗುರುಗಳ ಶ್ರಮ ಸಾರ್ಥಗೊಳಿಸಬೇಕು ಎಂದು ಪ್ರಾಧ್ಯಾಪಕ ಬೀರಪ್ಪ ಜಗ್ಗಲ್ ಕರೆ ನೀಡಿದರು.

ಪಟ್ಟಣದ ಶ್ರೀ ಸಂಗಮೇಶ್ವರ ಶಿಕ್ಷಣ ಸಂಸ್ಥೆ ಸಂಚಾಲಿತ ಶ್ರೀಮತಿ ಹನುಮವ್ವ ಸಂಗನಗೌಡ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಉತ್ತಮ ಗುರಿಯಿರಲಿ,



ಗುರಿ ತಲುಪುವ ಕಡೆ ಗಮನವಿರಲಿ, ಈ ಎರಡು ವರ್ಷ ಶ್ರಮವಹಿಸಿ ಓದಿದರೆ ಜೀವನ ಪರ್ಯಂತ ದೊಡ್ಡ ಹುದ್ದೆ ಪಡೆದು ಸುಖ ಜೀವನ ಸಾಗಿಸಬಹುದು ಎಂದರು.

ಪ್ರಾಧ್ಯಾಪಕರಾದ ಭೀಮಸಿಂಗ್ ನಾಯ್ಕ್ ಮಾತನಾಡಿ, ವಿದ್ಯಾರ್ಥಿಗಳು ಓದಿಗೆ ಸಮಯ ನೀಡಿ, ಪೂರಕ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಹೆತ್ತವರ ಮೇಲೆ ಪ್ರೀತಿ, ಗುರುಗಳ ಮೇಲೆ ನಂಬಿಕೆ, ಶಾಲೆಗಳ ಮೇಲೆ ಗೌರವವಿದ್ದರೆ ಮಾತ್ರ ನಿಮ್ಮ ಸಂಕಲ್ಪ ಈಡೇರುತ್ತದೆ, ನಿಮ್ಮ ಸಾಧನೆಗೆ ಇಡೀ ಸಮಾಜ ಹೆಮ್ಮೆಪಡುವಂತಾಗಲಿ ಎಂದು ಆಶಿಸಿದರು.

ಹಿರಿಯ ಪ್ರಾಧ್ಯಾಪಕ ಡಿ.ಕೆ ಮುಜಾವರ್ ಕಾರ್ಯಕ್ರಮ ಉದ್ಘಾಟಿಸಿದರು. ಪ್ರಾಚಾರ್ಯ ಬಸವರಾಜ ವೈ ಅಧ್ಯಕ್ಷತೆವಹಿಸಿ ಮಾತನಾಡಿದರು. ಈ ವೇಳೆ ಪ್ರಾಧ್ಯಾಪಕರಾದ ಬಸವರಾಜ ಖೈರವಾಡಗಿ, ನಿರುಪಾದಿ ಡಿ.ಕೆ, ಮಂಜುನಾಥ ಪಾಟೀಲ, ಅನಿಲಕುಮಾರ ಮಿಶ್ರಾ, ದುರ್ಗಾಸಿಂಗ್, ಶರಣಮ್ಮ ಪಾಟೀಲ, ವಿದ್ಯಾರ್ಥಿಗಳಾದ ಸುಮಂಗಲಾ, ಅನನ್ಯ ಪಾಟೀಲ, ಲಕ್ಷ್ಮೀ, ಸರಸ್ವತಿ, ಸಾಬಮ್ಮ, ಸಂಗೀತಾ, ಪವನಕುಮಾರ, ವೀರನಗೌಡ, ಹನುಮೇಶ, ವೆಂಕಟೇಶ, ಆಕಾಶ ಎಂ, ನರಸಣ್ಣ ಸೇರಿದಂತೆ ಹಲವರು ಭಾಗವಹಿಸಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.